ಸಂಪುಟ : 10 ಸಂಚಿಕೆ: 248 ಪುಟ : 4+2 ಬೆಲೆ: 3.00 ಶುಕ್ರವಾರ ನವೆಂಬರ್ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 248 Pages : 4+2 Price : 3.00 Friday November 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ರೈತ ಸಂಘಟನೆಗಳಿಂದ ಧರಣಿ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗೋವಿನಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸಬೇಕು, ಬೆಳೆಹಾನಿ, ಬೆಳೆವಿಮೆ ಪರಿಹಾರ ಕಲ್ಪಿಸಬೇಕು ಎಂಬಿತ್ಯಾದಿ ಬೇಡಿಕೆಗಳಿಗೆ ಆಗ್ರಹಿಸಿ ರೈತ ಸಂಘಟನೆಗಳ ನೇತೃತ್ವದಲ್ಲಿ ನ.15ರಂದು ಲಕ್ಷ್ಮೇಶ್ವರದಲ್ಲಿ ಬೃಹತ್ ಪ್ರತಿಭಟನೆ, ಧರಣಿ ಸತ್ಯಾಗ್ರಹ ನಡೆಸಲಾಗುತ್ತಿದೆ ಎಂದು ಹೋರಾಟದ ನೇತೃತ್ವ ವಹಿಸಿರುವ ರೈತ ಮುಖಂಡ ಮಂಜುನಾಥ ಮಾಗಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅತಿವೃಷ್ಟಿಯಿಂದ ಮುಂಗಾರಿನ ಬಹುತೇಕ ಬೆಳೆಗಳು ಹಾಳಾಗಿ ರೈತರು ಸಂಕಷ್ಟದಲ್ಲಿದ್ದರೂ ರೈತರಿಗೆ ಬೆಳೆಹಾನಿಯೂ ಇಲ್ಲ, ಬೆಳೆವಿಮೆಯೂ ಇಲ್ಲ. ಇದೀಗ ಬಹುತೇಕ ರೈತರ ಆಧಾರವೇ ಆಗಿರುವ ಗೋವಿನಜೋಳದ ಬೆಲೆ ಸಂಪೂರ್ಣ ಕುಸಿದಿದೆ. ಬೆಂಬಲ ಬೆಲೆ ಖರೀದಿ ಕೇಂದ್ರಗಳು ಘೋಷಣೆಗೆ ಮಾತ್ರ ಸೀಮಿತವಾಗಿವೆ. ಸರ್ಕಾರದ ಗಮನ ಸೆಳೆಯುವ ನಿಟ್ಟಿನಲ್ಲಿ ಹೋರಾಟ ಅನಿವಾರ್ಯವಾಗಿದೆ.

ಈ ನಿಟ್ಟಿನಲ್ಲಿ ನ. 15ರಂದು ಬೆಳಿಗ್ಗೆ 10ಕ್ಕೆ ಪಟ್ಟಣದ ಸೋಮೇಶ್ವರ ದೇವಸ್ಥಾನದಿಂದ ಎತ್ತು, ಚಕ್ಕಡಿಯೊಂದಿಗೆ ರೈತರು ಪ್ರಮುಖ ಮಾರ್ಗದ ಮೂಲಕ ಪ್ರತಿಭಟನಾ ಮೆರವಣಿಗೆ ನಡೆಸಲಿದ್ದಾರೆ. ನಂತರ ಪಟ್ಟಣದ ಶಿಗ್ಲಿ ನಾಕಾದ ಸಂಗೊಳ್ಳಿ ರಾಯಣ್ಣ ವೃತ್ತದ ಹತ್ತಿರ ಬೇಡಿಕೆ ಈಡೇರುವವರೆಗೂ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುತ್ತದೆ. ತಾಲೂಕಾ ಸಮಗ್ರ ರೈತ ಹೋರಾಟ ಸಮಿತಿ, ಅಖಿಲ ಕರ್ನಾಟಕ ಕಿಸಾನ್ ಜಾಗೃತಿ ಸಂಘ, ಕೃಷಿಕ ಸಮಾಜ, ಉತ್ತರ ಕರ್ನಾಟಕ ಮಹಾಸಭಾ, ಕನ್ನಡಪರ ಸಂಘಟನೆಗಳು, ರೈತ ಮುಖಂಡರ ನೇತೃತ್ವದಲ್ಲಿ ನಡೆಯುವ ಈ ಹೋರಾಟದಲ್ಲಿ ತಾಲೂಕಿನ ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ರೈತಪರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಬೇಕೆಂದು ವಿನಂತಿಸಿದ್ದಾರೆ.

### ಇತಿಹಾಸ ಅಕಾಡೆಮಿ ರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭ

# ಇತಿಹಾಸ ಅಕಾಡೆಮಿ ಸಂಶೋಧಕರಿಗೆ ಮಾರ್ಗದರ್ಶಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 39 ವರ್ಷಗಳಿಂದ ನಿರಂತರವಾಗಿ ಕರ್ನಾಟಕ ಇತಿಹಾಸ ಸಂಶೋಧಕರ ಸಮ್ಮೇಳನಗಳು, ಐತಿಹಾಸಿಕ ಪರಂಪರೆ ಉಳಿಸಿ ಕಾರ್ಯಕ್ರಮಗಳು ಮತ್ತು ಇತಿಹಾಸ ದರ್ಶನದಂತಹ ಮಹತ್ವದ ಸಂಪುಟಗಳ ಪ್ರಕಟಣೆಯ ಮೂಲಕ ಕರ್ನಾಟಕ ಇತಿಹಾಸ ಅಕಾಡೆಮಿಯು ಯುವ ಇತಿಹಾಸ ಸಂಶೋಧಕರಿಗೆ ಮಾರ್ಗದರ್ಶಿ ದೀಪವಾಗಿದೆ ಎಂದು ಹಿರಿಯ ಇತಿಹಾಸ ಸಂಶೋಧಕರಾದ ಡಾ. ಲಕ್ಷ್ಮಣ ತೆಲಗಾವಿ ಹೇಳಿದರು.

ಅವರು ಗದುಗಿನ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಇತಿಹಾಸ ಅಕಾಡೆಮಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಇವುಗಳ ಆಶ್ರಯದಲ್ಲಿ ಇತಿಹಾಸ ಅಕಾಡೆಮಿಯ ರಾಷ್ಟ್ರೀಯ ವಾರ್ಷಿಕ ಸಮ್ಮೇಳನದಲ್ಲಿ ಜರುಗಿದ ಸಮಾರೋಪ ಸಮಾರಂಭದಲ್ಲಿ ಸಮಾರೋಪ ನುಡಿಗಳನ್ನಾಡಿದರು.

ಕರ್ನಾಟಕ ಇತಿಹಾಸ ಅಕಾಡೆಮಿಯು ಹಿರಿಯ ಇತಿಹಾಸ ತಜ್ಞ ಡಾ. ಸೂರ್ಯನಾಥ ಕಾಮತರಿಂದ ಸ್ಥಾಪನೆಗೊಂಡು ವಿವಿಧ ಇತಿಹಾಸ ಸಂಶೋಧಕರಿಗೆ ವೇದಿಕೆಯಾಗಿ ಇದೀಗ ಡಾ. ದೇವರಕೊಂಡರೆಡ್ಡಿಯವರ ನೇತೃತ್ವದಲ್ಲಿ ಯಶಸ್ವಿಯಾಗಿ ಮುನ್ನಡೆಯುತ್ತಿದೆ. ಎಲ್ಲ 'ಇಸಂ'ಗಳಿಂದ ದೂರವಾಗಿ ವಸ್ತುನಿಷ್ಠ ಇತಿಹಾಸಕ್ಕೆ ಪೂರಕವಾಗಿ ಆಕರಗಳನ್ನು ಸೃಷ್ಟಿಸುವ ಮಹತ್ವಪೂರ್ಣ ಸಂಘಟನೆಯಾಗಿದೆ. ಇದನ್ನು ಉಳಿಸಿ-ಬೆಳೆಸುವ ಜವಾಬ್ದಾರಿ ಯುವ ಸಂಶೋಧಕರ ಮೇಲಿದೆ ಎಂದು ಹೇಳಿದರು.



ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಡಾ. ಶರಣು ಗೋಗೇರಿ ಮಾತನಾಡಿ, ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಲಕ್ಕುಂಡಿ ಪ್ರಾಧಿಕಾರ ಅನೇಕ ಮಹತ್ವದ ಕಾರ್ಯಗಳನ್ನು ಕೈಗೊಳ್ಳುತ್ತಾ ಬಂದಿದೆ. ಈಗಾಗಲೇ ಲಕ್ಕುಂಡಿ ಪರಿಸರದ 13 ದೇವಸ್ಥಾನಗಳ ಪುನರುತ್ಥಾನ ಕೈಗೊಂಡಿದ್ದು, ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಲಕ್ಕುಂಡಿ ಉತ್ಖನನಕ್ಕೆ ಚಾಲನೆ ನೀಡಿದ್ದಾರೆ. ಕಳೆದ ವರ್ಷ ಲಕ್ಕುಂಡಿ ಪರಿಸರದ ಪ್ರಾಚ್ಯ ವಸ್ತುಗಳ ಅನ್ವೇಷಣಾ ಹಾಗೂ ಸಂರಕ್ಷಣಾ ಕಾರ್ಯವನ್ನು ಕೈಗೊಂಡಿದ್ದು, ನಾಲ್ಕು ಎಕರೆ ಬಯಲು ಜಾಗೆಯಲ್ಲಿ ವಿಶಿಷ್ಟ ವಸ್ತು ಸಂಗ್ರಹಾಲಯವನ್ನು ನಿರ್ಮಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಲಕ್ಕುಂಡಿ ಪರಿಸರ ಅಭಿವೃದ್ಧಿಗೆ ಇತಿಹಾಸ ಸಂಶೋಧಕರು ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಬೇಕೆಂದು ಹೇಳಿದರು.

> ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಪರಮಶಿವಮೂರ್ತಿ ಮಾತನಾಡಿ, ಇತಿಹಾಸ ಅಕಾಡೆಮಿಯು ಪ್ರತಿವರ್ಷ ನೂರಾರು ಹೊಸ ಶಾಸನಗಳ ಸಂಶೋಧನೆ, ದೇವಾಲಯ, ಮೂರ್ತಿ ಶಿಲ್ಪಗಳ ವಿಶ್ಲೇಷಣೆ, ಪ್ರಾಚ್ಯವಸ್ತು ಸಂರಕ್ಷಣೆಯ ಮಹತ್ತರ ಕಾರ್ಯವನ್ನು ಮಾಡುತ್ತಾ ಬಂದಿದೆ. ಹೆಚ್ಚು ಹೆಚ್ಚು ಜನರು ಇದರ ಸದಸ್ಯರಾಗುವುದರ ಮೂಲಕ ನಮ್ಮ ನಾಡಿನ ಇತಿಹಾಸ, ಸಂಸ್ಕೃತಿಯನ್ನು ಉಳಿಸಿ-ಬೆಳೆಸಬೇಕಾಗಿದೆ ಎಂದು ಹೇಳಿದರು.

ಕರ್ನಾಟಕ ಇತಿಹಾಸ ಅಕಾಡೆಮಿಯ ಅಧ್ಯಕ್ಷ ಡಾ. ದೇವರಕೊಂಡಾರೆಡ್ಡಿ ಸಮ್ಮೇಳನ ಆಯೋಜನೆಗೆ ಸಹಕರಿಸಿದ ಸರ್ವರಿಗೂ ಕೃತಜ್ಞತೆ ಸಲ್ಲಿಸಿದರು. ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಸಹಾಯಕ ನಿರ್ದೇಶಕ ಡಾ. ಅಬ್ದುಲ್ ಅಜೀಜ್ ಮುಲ್ಲಾ ಸರ್ವರನ್ನು ಸ್ವಾಗತಿಸಿದರು. ಪ್ರೊ. ಶಕುಂತಲಾ ಸಿಂಧೂರ ನಿರೂಪಿಸಿದರು. ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಡಾ. ಕೆ.ಎಲ್. ರಾಜಶೇಖರ ವಂದಿಸಿದರು. ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಇತಿಹಾಸ ಸಂಶೋಧಕರು, ಉಪನ್ಯಾಸಕರು ಪಾಲ್ಗೊಂಡಿದ್ದರು.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

110 ಕೆವ್ಹಿ ಲಕ್ಷ್ಮೇಶ್ವರ, 110 ಕೆವ್ಹಿ ಬಾಗೇವಾಡಿ ಹಾಗೂ 110 ಕೆ.ವ್ಹಿ. ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ನ. 15 ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. 110 ಕೆವ್ಹಿ ಲಕ್ಷ್ಮೇಶ್ವರ, 110 ಕೆವ್ಹಿ ಬಾಗೇವಾಡಿ ಹಾಗೂ 110 ಕೆವ್ಹಿ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ, 33 ಕೆವ್ಹಿ ಎಮ್.ಎಮ್.ಸಿ.ಎಲ್ ಗಾಳಿಯಂತ್ರ ಘಟಕ ಮತ್ತು 33 ಕೆವ್ಹಿ ಸೊಮೆಶ್ವರ ಸ್ಪಿನ್ನಿಂಗ್ ಮಿಲ್, ಸೋಲಾರ್-1, ಸೋಲಾರ್-2 ಹಾಗೂ 110 ಕೆ.ವ್ಹಿ. ಎನಾರಕಾನ, 110 ಕೆ.ವ್ಹಿ. ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33 ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರ, 110 ಕೆವ್ಹಿ ಬಾಗೇವಾಡಿ ಉಪಕೇಂದ್ರದ ವ್ಯಾಪ್ತಿಗೆ ಬರುವ ಸೋಲಾರ್, ಎನ್.ಜೆ.ವೈಗಳಿಂದ ಪೂರೈಸಲ್ಪಡುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಪೋಷಕರ-ಶಿಕ್ಷಕರ ಮಹಾಸಭೆಯ ಪೋಸ್ಟರ್ ಬಿಡುಗಡೆಗೊಳಿಸಿದ ಡಿಡಿಪಿಐ ಆರ್.ಎಸ್. ಬುರಡಿ

# ಮಹಾಸಭೆಯನ್ನು ಯಶಸ್ವಿಗೊಳಿಸೋಣ



■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲೆಯು ಸಮುದಾಯದ ಒಂದು ಭಾಗವಾಗಿದ್ದು, ಭಾಗೀದಾರರು ಹಾಗೂ ಪೋಷಕರ ವಿಶ್ವಾಸ ಹಾಗೂ ಸಹಕಾರವು ಸರಕಾರಿ ಶಾಲೆಗಳನ್ನು ಉನ್ನತ ಮಟ್ಟಕ್ಕೆ ಕೊಂಡೊಯುತ್ತದೆ. ಹೀಗಾಗಿ ಸಮುದಾಯದ ಸಹಭಾಗಿತ್ವದೊಂದಿಗೆ ಪೋಷಕರ ಶಿಕ್ಷಕರ ಮಹಾಸಭೆಯನ್ನು ಯಶಸ್ವಿಗೊಳಿಸೋಣ ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಹೇಳಿದರು.

ಅವರು ಗುರುವಾರ ಗದಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಜರುಗಿದ ನವಂಬರ್ 14ರ ಪೋಷಕರ ಶಿಕ್ಷಕರ ಮಹಾ ಸಭೆಯ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದರು.

ಶುಕ್ರವಾರ ನಡೆಯಲಿರುವ ಪೋಷಕರ ಹಾಗೂ ಶಿಕ್ಷಕರ ಮಹಾಸಭೆಯು ರಾಜ್ಯಾದ್ಯಂತ ಎಲ್ಲ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಜರುಗಲಿದ್ದು, ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ವಿನಂತಿಸಿದರು.

ಜಿಲ್ಲಾ ಯೋಜನಾ ಉಪ ನಿರ್ದೇಶಕ ರವಿಪ್ರಕಾಶ್ ಮಾತನಾಡಿ, ಸರ್ಕಾರಿ ಶಾಲೆಗಳು ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದು, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯೇ ನಮ್ಮೆಲ್ಲರ ಗುರಿಯಾಗಿದೆ. ಪಾಲಕ-ಪೋಷಕರ ಸಹಭಾಗಿತ್ವ ಸರ್ಕಾರಿ ಶಾಲೆಗಳಿಗೆ ಸ್ಪೂರ್ತಿ ನೀಡುತ್ತಿವೆ. ಅದಕ್ಕಾಗಿ ಪಾಲಕರು ಆಗಾಗ ಶಾಲೆಗೆ ಭೇಟಿ ನೀಡುವಂತೆ ಕ್ರಮವಹಿಸಬೇಕೆಂದರು.

ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, ಶಾಲೆಗಳು ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸುತ್ತವೆ. ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ವೈಯುಕ್ತಿಕ ಗಮನದೊಂದಿಗೆ ಸರ್ಕಾರಿ ಸೌಲಭ್ಯಗಳನ್ನು ಮಕ್ಕಳಿಗೆ ತಲುಪಿಸಿ ಅವರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದ್ದು, ಪಾಲಕರ ಸಹಭಾಗಿತ್ವದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದರು.

> ಗದಗ ಶಹರಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟಪ್ಪನವರ ಮಾತನಾಡಿ, ಸರ್ಕಾರಿ ಶಾಲಾ ಶಿಕ್ಷಣದ ಉತ್ತಮ ಗುಣಮಟ್ಟ, ಹಾಜರಾತಿ, ಮಧ್ಯಾಹ್ನ ಬಿಸಿ ಊಟ, ಪಠ್ಯಪುಸ್ತಕ, ಸಮವಸ್ತ್ರ, ಉಚಿತ ಆರೋಗ್ಯ ತಪಾಸಣೆ ಜೊತೆಗೆ ಪೂರಕ ಪೌಷ್ಟಿಕ ಆಹಾರ ವಿತರಣೆ ಇವೆಲ್ಲವೂ ಇಲಾಖೆಯ ನಿಯಮಾನುಸಾರ ಮಕ್ಕಳಿಗೆ ಉಚಿತವಾಗಿ ವಿತರಿಸಲಾಗುತ್ತಿದ್ದು, ಪಾಲಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಬೇಕೆಂದರು.

ಕಾರ್ಯಕ್ರಮದಲ್ಲಿ ಗದಗ ಶಹರ ವಲಯದ ಕ್ಷೇತ್ರ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯನಮಠ, ಎ.ಪಿ.ಸಿ.ಓ ಶಿವಕುಮಾರ್ ಕುರಿ, ಎಸ್.ಕೆ. ಮಂಗಳಗುಡ್ಡ, ಪ್ರಶಾಂತ ಕನಾಜ ಸಂಪನ್ಮೂಲ ವ್ಯಕ್ತಿಗಳಾದ ಐ.ಬಿ. ಮಡಿವಾಳರ, ಕವಿತಾ ಬೇಲೇರಿ, ವಿದ್ಯಾ ಗದ್ದಾಳೆ ಮುಂತಾದವರಿದ್ದರು.

### ಕರ್ನಾಟಕ ರೈತ ಸೇನೆಯ ರೋಣ ತಾಲೂಕು ಉಪಾಧ್ಯಕ್ಷ ಶಿವಲಿಂಗಪ್ಪ ಬೋಪಳಾಪುರ ಆಗ್ರಹ

# ಬೆಳೆಗಳಿಗೆ ನ್ಯಾಯಯುತ ಬೆಲೆ ಸಿಗುವಂತಾಗಲಿ




■ ವಿಜಯಸಾಕ್ಷಿ ಸುದ್ದಿ, ಗದಗ

ರೈತರು ಬೆವರು ಸುರಿಸಿ ಬೆಳೆದ ಬೆಳೆಗಳಿಗೆ ಸೂಕ್ತ ಬೆಲೆ ಸಿಗದೆ ಇಂದು ಬೀದಿಗಿಳಿದು ಹೋರಾಟ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೇಂದ್ರ ಮತ್ತು ರಾಜ್ಯ ಸರಕಾರಗಳು ತಕ್ಷಣ ರೈತರ ಸಮಸ್ಯೆಗೆ ಸ್ಪಂದಿಸಬೇಕು ಎಂದು ಕರ್ನಾಟಕ ರೈತ ಸೇನೆಯ ರೋಣ ತಾಲೂಕು ಉಪಾಧ್ಯಕ್ಷ ಶಿವಲಿಂಗಪ್ಪ ಬೋಪಳಾಪುರ ಆಗ್ರಹಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಭಾಷಣಗಳಲ್ಲಿ ರೈತರ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಹೇಳುತ್ತಾರೆ. ಆದರೆ, ಇಂದು ರಾಜ್ಯದಲ್ಲಿ ನಡೆಯುತ್ತಿರುವ ರೈತರ ನಿರಂತರ ಹೋರಾಟಗಳನ್ನು ಗಮನಿಸಿದರೆ ಅವರ ಹೇಳಿಕೆ ಶುದ್ಧ ಸುಳ್ಳು ಎಂಬುದು ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು.

ಪ್ರಧಾನಿಗಳು ಹೇಳಿದಂತೆ ನಿಜಕ್ಕೂ ರೈತರ ಸಮಸ್ಯೆಗೆ ಮೊದಲ ಆದ್ಯತೆ ನೀಡಿದ್ದರೆ, ಇಂದು ರೈತರು ಬೀದಿಗಿಳಿದು ಹೋರಾಟ ಮಾಡುವ ಸನ್ನಿವೇಶವೇ ನಿರ್ಮಾಣ ಆಗುತ್ತಿರಲಿಲ್ಲ. ಇನ್ನು ಮುಂದಾದರೂ ಸರ್ಕಾರಗಳು ರೈತರ ಕಷ್ಟಗಳಿಗೆ ಸ್ಪಂದಿಸಬೇಕು. ರೈತರು ಬೆಳೆದ ಎಲ್ಲಾ ಬೆಳೆಗಳಿಗೆ ಸರಿಯಾದ ಬೆಲೆ ಸಿಗುವಂತೆ ಎಂಎಸ್‌ಪಿ (ಕನಿಷ್ಠ ಬೆಂಬಲ ಬೆಲೆ) ಹಾಗೂ ಕಬ್ಬು ಬೆಳೆಗಾರರಿಗೆ ಎಂಆರ್‌ಪಿ (ಕನಿಷ್ಠ ಕಾಯ್ದಿರಿಸಿದ ಬೆಲೆ) ಕಾನೂನುಗಳನ್ನು ರಚಿಸಿ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ರೈತನ ಹಿತಕ್ಕಾಗಿ ನಿರ್ದಿಷ್ಟವಾದ ಕಾನೂನು ರೂಪಗೊಂಡು, ಆತನ ಬೆಳೆಗೆ ಸಮರ್ಪಕ ಬೆಲೆ ಸಿಗುವಂತಾಗಬೇಕು. ಪ್ರಧಾನ ಮಂತ್ರಿಗಳು ರೈತರ ಸಮಸ್ಯೆಗೆ ಮೊದಲ ಆದ್ಯತೆ ಎಂದು ಸುಳ್ಳು ಹೇಳುವುದನ್ನು ಬಿಟ್ಟು ನಿಜವಾಗಿ ರೈತರ ಪರವಾಗಿ ನಿಲ್ಲಬೇಕು. ಇಲ್ಲದಿದ್ದರೆ, ಗದಗ ಜಿಲ್ಲೆ ಸೇರಿದಂತೆ ಇಡೀ ರಾಜ್ಯಾದ್ಯಂತ ಬೃಹತ್ ಹೋರಾಟ ಮಾಡಿ ರೈತರ ಶಕ್ತಿಯನ್ನು ಪ್ರದರ್ಶಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರೈತ ಸೇನೆಯ ಪದಾಧಿಕಾರಿಗಳಾದ ಶಿವಾನಂದ ಸುರೆಬಾನ, ರಮೇಶ ಚಲವಾದಿ, ಹನುಮಂತ, ಶೇಖಸಾಬ ಪಿಂಜಾರ ಮುಂತಾದವರು ಉಪಸ್ಥಿತರಿದ್ದರು.


### ಬಹುಗ್ರಾಮ ಕುಡಿಯುವ ನೀರು ಯೋಜನೆಯ ಶುದ್ಧೀಕರಣ ಘಟಕದ ಕಾಮಗಾರಿ ಪರಿಶೀಲನೆ

# ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯ 388 ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ಡಿಬಿಓಟಿ (ಆಃಔಖ) ಮಾದರಿಯಲ್ಲಿ ಜಾರಿಯಲ್ಲಿರುವ ಬಹುಗ್ರಾಮ ನೀರು ಸರಬರಾಜು ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಧಾರವಾಡ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಅವರು ನಿನ್ನೆ ಬುಧವಾರ ಸಂಜೆ ಸವದತ್ತಿಯ ವಿದ್ಯುತ್ ವಿತರಣಾ ಉಪಕೇಂದ್ರ ಹಾಗೂ ಹಿರೇಉಳ್ಳಿಗೇರಿ ಗ್ರಾಮದಲ್ಲಿ ನಿರ್ಮಿಸಿರುವ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಜಲ ಶುದ್ಧೀಕರಣ ಘಟಕದ ಕಾಮಗಾರಿ ಪರಿಶೀಲಿಸಿ ಮಾತನಾಡಿದರು.



ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಎಲ್&ಟಿ ಕಂಪನಿಯು ಗುತ್ತಿಗೆ ಆಧಾರದ ಮೇಲೆ ನಿರ್ವಹಿಸುತ್ತಿದ್ದು, ಇಂಟೆಕ್ ಪಾಯಿಂಟ್, ಪೈಪ್‌ಲೈನ್ ಮಾರ್ಗ ಹಾಗೂ ವಾಟರ್ ಟ್ರೀಟ್‌ಮೆಂಟ್ ಪ್ಲಾಂಟ್‌ಗಳ ನಿರ್ಮಾಣ ಕಾಮಗಾರಿಗಳು ಗುಣಮಟ್ಟದಿಂದ ಆಗಬೇಕು. ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ, ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಬೇಕು ಎಂದು ಹೇಳಿದರು.

ಪ್ರಸ್ತುತ ರೇಣುಕಾ ಜಲಾಶಯದಿಂದ ನೇರವಾಗಿ ನೀರನ್ನು ಪಂಪ್ ಮಾಡುವ ಕಾಮಗಾರಿ ಹಾಗೂ ಜಲ ಶುದ್ಧೀಕರಣ ಘಟಕದ ಕೆಲವು ಕಾಮಗಾರಿಗಳು ಪ್ರಗತಿಯಲ್ಲಿದೆ. ರಾ ವಾಟರ್ ರೈಜಿಂಗ್ ಮೇನ್‌ನ ಬಾಕಿ ಕೆಲಸಗಳನ್ನು 7 ದಿನಗಳೊಳಗೆ ಹಾಗೂ ಡಬ್ಲ್ಯುಟಿಪಿ ಕಾಮಗಾರಿಗಳನ್ನು 1 ತಿಂಗಳೊಳಗೆ ಪೂರ್ಣಗೊಳಿಸಲು ಅವರು ಸೂಚಿಸಿದರು. ಇದೇ ಸಂದರ್ಭದಲ್ಲಿ ಸವದತ್ತಿ ವಿದ್ಯುತ್ ವಿತರಣಾ ಉಪಕೇಂದ್ರಕ್ಕೆ ಭೇಟಿ ನೀಡಿ, ನೀರು ಸರಬರಾಜು ಯೋಜನೆಗೆ ಸಂಬಂಧಿಸಿದ ಪ್ರಸರಣ ರೇಖೆ ಕಾಮಗಾರಿಯನ್ನು ಪರಿಶೀಲಿಸಿದರು. ಸಂಬಂಧಿತ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಈ ಕಾಮಗಾರಿಯನ್ನು ಒಂದು ವಾರದೊಳಗೆ ಪೂರ್ಣಗೊಳಿಸುವಂತೆ ಸಿಇಓ ಅವರು ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಹಣಾ ಅಭಿಯಂತರ ಜಗದೀಶ ಪಾಟೀಲ, ಗುತ್ತಿಗೆದಾರ ಸಂಸ್ಥೆಯ ಪ್ರತಿನಿಧಿಗಳು ಹಾಗೂ ಜಿ.ಪಂ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯ ಮಟ್ಟಕ್ಕೆ ಆಯ್ಕೆ






■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನ.12ರಂದು ನಡೆದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಪಟ್ಟಣದ ಅನ್ನದಾನ ವಿಜಯ ಪ್ರೌಢಶಾಲೆಯ ವಿದ್ಯಾರ್ಥಿ ಮಂಗಳೇಶ ಗೊಂಧಿ 3000 ಮೀ ಓಟದಲ್ಲಿ ದ್ವಿತೀಯ ಸ್ಥಾನ, ವಿದ್ಯಾರ್ಥಿ ಶ್ರೇಯಸ್ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಶಾಲೆಯ ಮುಖ್ಯಶಿಕ್ಷಕ ಎಂ.ಬಿ. ಸಜ್ಜನರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇಕೆದಾಟು ಯೋಜನೆ ವಿರೋಧಿಸಿ ತಮಿಳುನಾಡು ಸಲ್ಲಿಸಿದ್ದ ಅರ್ಜಿ ವಜಾ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ಸರ್ಕಾರ ನಿರ್ಮಿಸಲು ಮುಂದಾಗಿರುವ ಮೇಕೆದಾಟು ಸಮತೋಲನ ಜಲಾಶಯ ಯೋಜನೆಯ ವಿರುದ್ಧ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಗುರುವಾರ (ನ.13) ವಜಾಗೊಳಿಸಿದ್ದು, ಪ್ರಸ್ತುತ ಅರ್ಜಿಯು 'ಅಕಾಲಿಕ'ವಾಗಿದೆ (ಮುಂಚಿತವಾಗಿ ಅಥವಾ ತುಂಬಾ ಬೇಗ ಸಲ್ಲಿಸಲಾಗಿದೆ) ಎಂದು ಹೇಳಿದೆ.

ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ, ನ್ಯಾಯಮೂರ್ತಿಗಳಾದ ಕೆ. ವಿನೋದ್ ಚಂದ್ರನ್ ಮತ್ತು ಎನ್.ವಿ. ಅಂಜಾರಿಯಾ ಅವರನ್ನೊಳಗೊಂಡ ಪೀಠವು, ತಮಿಳುನಾಡಿನ ಆಕ್ಷೇಪಣೆಗಳು ಹಾಗೂ ತಜ್ಞ ಸಂಸ್ಥೆಗಳು, ಕಾವೇರಿ ಜಲ ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ) ಮತ್ತು ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರದ (ಸಿಡಬ್ಲ್ಯೂಎಂಎ) ಅಭಿಪ್ರಾಯಗಳನ್ನು ಪರಿಗಣಿಸಿದ ನಂತರವೇ ಯೋಜನೆಯನ್ನು ಅನುಮೋದಿಸಲಾಗುವುದು ಎಂದು ಹೇಳಿದೆ. ಈ ಹಂತದಲ್ಲಿ, ಕೇಂದ್ರ ಜಲ ಆಯೋಗ (ಸಿಡಬ್ಲ್ಯೂಸಿ) ಹೊರಡಿಸಿದ ಆದೇಶದಿಂದ ಮಾಡುತ್ತಿರುವ ಕೆಲಸ ಕೇವಲ ವಿವರವಾದ ಯೋಜನಾ ವರದಿ (ಡಿಪಿಆರ್) ತಯಾರಿಕೆ ಮಾತ್ರ ಅದೂ ಕೂಡ, ತಮಿಳುನಾಡು ಸರ್ಕಾರ ಸಲ್ಲಿಸಿರುವ ಆಕ್ಷೇಪಣೆಗಳು, ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯೂಎಂಎ), ಕಾವೇರಿ ಜಲ ನಿಯಂತ್ರಣಾ ಸಮಿತಿ (ಸಿಡಬ್ಲ್ಯೂಆರ್‌ಸಿ)ಯ ತಜ್ಞರ ಅಭಿಪ್ರಾಯಗಳನ್ನು ಪರಿಗಣಿಸಿ ಮಾಡಲಾಗುತ್ತಿದೆ ಎಂದು ಸುಪ್ರೀಂ ಕೋರ್ಟ್ ತಿಳಿಸಿದೆ.

## ಮೌನವಾಗಿದೆ ಮನಸ್ಸು: ನಂಬಿಕೆಯ ನಂಟು ಕಳೆದುಕೊಂಡ ಹೋರಾಟಗಾರನ ಆತ್ಮಕಥೆ

# ಹೋರಾಟದ ಹಾದಿಯ ವಿರಹಗೀತೆ!



ಹೋರಾಟದ ಹಾದಿ ಸುಲಭವಾಗಿದ್ದರೆ, ಅದು ಹೋರಾಟವೇ ಆಗಿರಲಿಲ್ಲ. ಬದುಕಿನ ಪ್ರತಿಯೊಂದು ತಿರುವು ನನಗೆ ಹೊಸ ಪಾಠ ಕಲಿಸಿತು. ಸತ್ಯಕ್ಕಾಗಿ ನಿಂತರೆ ಕಣ್ಣೀರೂ, ಒಂಟಿತನವೂ ಸಂಗಾತಿಗಳಾಗುತ್ತಾರೆ ಎಂಬುದು ನಿಜವೇ. ಜನರಿಗಾಗಿ ಬದುಕಿದ್ದ ನಾನು, ಇಂದು ಜನರ ನಡುವೆ ಕಣ್ಮರೆಯಾಗಿದ್ದೇನೆ. ಆ ಹೋರಾಟದ ಉರಿಯ ಹೃದಯ ಈಗ ಮೌನದ ಚಳಿಯಲ್ಲಿ ತೇಲುತ್ತಿದೆ.

ಒಮ್ಮೆ ನನ್ನ ಮಾತು ಜನರ ಹೃದಯ ತಟ್ಟುತ್ತಿತ್ತು. ಅನ್ಯಾಯದ ವಿರುದ್ಧ ಎದ್ದು ನಿಲ್ಲುತ್ತಿದ್ದವರಲ್ಲಿ ನಾನೂ ಒಬ್ಬ. ಬದಲಾವಣೆಗಾಗಿ ಹೋರಾಡಿದ ಕ್ಷಣಗಳಲ್ಲಿ ಬದುಕಿನ ಅರ್ಥ ಕಂಡಿದ್ದೆ. ಆದರೆ ಕಾಲ ಬದಲಾಗುತ್ತಿದ್ದಂತೆ ಮುಖಗಳೂ ಬದಲಾಗಿದವು. ಹತ್ತಿರದವರು ದೂರವಾಗಿದರು, ಆತ್ಮೀಯರು ಮೌನವಾದರು. ಹೊರಗಿನ ವಿರೋಧಕ್ಕಿಂತ ಒಳಗಿನ ಮೌನವೇ ನನ್ನನ್ನು ಮುರಿದಿತು.

ಜನರ ಪರ ಹೋರಾಡಿದ ನಾನು, ಅವರ ಕಣ್ಣಲ್ಲಿ ಪ್ರಶ್ನೆಯಾದೆ. ನಂಬಿಕೆಯ ಕಂಬದ ಮೇಲೆ ಕಟ್ಟಿದ್ದ ಹೋರಾಟದ ಮನೆ, ಅನುಮಾನಗಳ ಗಾಳಿಯಿಂದ ಕುಸಿಯಿತು. ಸತ್ಯಕ್ಕಾಗಿ ನಿಂತಿದ್ದವನಿಗೆ ಸುಳ್ಳಿನ ನೆರಳು ಅಂಟಿದಾಗ ಎಷ್ಟು ನೋವಾಗುತ್ತದೆ ಎಂಬುದನ್ನು ನಾನು ಮಾತ್ರ ತಿಳಿದಿದ್ದೇನೆ. ಹೋರಾಟದ ಹಾದಿ ಕೇವಲ ಕೂಗಾಟವಲ್ಲ, ಅದು ಮೌನದಲ್ಲಿಯೇ ಕಣ್ಣೀರಿನ ಭಾಷೆ, ಮಾತನಾಡುವ ಪಥ.

ನಮ್ಮ ಹೋರಾಟದಲ್ಲಿ ನಮ್ಮವರೇ ಅಡ್ಡಿಯಾದರು ಎಂಬ ಯೋಚನೆ ಮನಸ್ಸನ್ನು ಕಿತ್ತುಕೊಳ್ಳುತ್ತದೆ. ಜನರ ಒಳಗಿನಿಂದ ಬಂದ ವಿರೋಧವೇ ಹೃದಯ ಮುರಿಯುತ್ತದೆ. ಶತ್ರು ಎದುರಿನಿಂದ ಬರುವಾಗ ತಯಾರಿ ಇರುತ್ತದೆ, ಆದರೆ ಸ್ನೇಹಿತ ಬೆನ್ನ ಹಿಂದೆ ಬರುವಾಗ ರಕ್ಷಣೆಯೇ ಇರುವುದಿಲ್ಲ. ಅದೇ ಹೋರಾಟಗಾರನ ಅತಿದೊಡ್ಡ ಪಾಠ.

ಒಮ್ಮೆ ನಂಬಿಕೆಯ ಧ್ವನಿಯಾಗಿ ನಿಂತಿದ್ದ ನಾನು, ಇಂದು ಮೌನದ ನೆರಳಲ್ಲಿ ನನ್ನನ್ನು ಹುಡುಕುತ್ತಿದ್ದೇನೆ. ಹೋರಾಟದ ಬೆಂಕಿ ಈಗ ನಿಧಾನವಾಗಿ ಬೂದಿಯಾಗುತ್ತಿದೆ. ಆದರೂ ಆ ಬೂದಿಯೊಳಗೆ ಉರಿಯುವ ತುಂಡು ಜೀವಂತವಾಗಿದೆ. ಅದು ನನ್ನ ನಂಬಿಕೆಯ ಬೆಳಕು. ಹೋರಾಟ ತಾತ್ಕಾಲಿಕವಾಗಿ ನಿಂತರೂ ಆತ್ಮದೊಳಗಿನ ಶಕ್ತಿ ಎಂದಿಗೂ ಸಾಯುವುದಿಲ್ಲ.

ಜನ ಮರೆತರೂ ಇತಿಹಾಸ ಮೌನವಾಗುವುದಿಲ್ಲ. ನಾನು ಬರೆದ ಪ್ರತಿಯೊಂದು ಪಂಕ್ತಿ, ಉಚ್ಚರಿಸಿದ ಪ್ರತಿಯೊಂದು ಶಬ್ದ, ಎದುರಿಸಿದ ಪ್ರತಿಯೊಂದು ವಿರೋಧ... ಎಲ್ಲವೂ ಕಾಲದ ದಾಖಲೆಯಾಗಿ ಉಳಿಯುತ್ತವೆ. ಜನರು ಮರೆತುಬಿಟ್ಟರೂ ಸತ್ಯದ ದಾರಿಯಲ್ಲಿ ನಡೆದ ಹೆಜ್ಜೆ ಗುರುತುಗಳನ್ನು ಯಾರೂ ಅಳಿಸಲಾರರು.

ಮನಸ್ಸು ಮೌನವಾಗಿದೆ ಎಂಬುದೇ ನನ್ನ ಹೊಸ ಭಾಷೆ. ಈಗ ಶಬ್ದಗಳಿಗಿಂತ ಅರ್ಥ ಮುಖ್ಯ. ಕೂಗುವುದಕ್ಕಿಂತ ನಿಶ್ಶಬ್ದತೆಯೇ ಹೆಚ್ಚು ಘನತೆಯಾಗಿದೆ. ಈ ಮೌನ ನನ್ನ ಸೋಲು ಅಲ್ಲ, ಇದು ನನ್ನ ಶಾಂತಿಯ ಸಾಕ್ಷಿ. ನಾನು ಮಾತನಾಡದರೂ ನನ್ನ ನೋಟ ಹೇಳುತ್ತಿದೆ, ಹೋರಾಟ ಇನ್ನೂ ಮುಗಿದಿಲ್ಲ.

ನಾಯಕನ ಹಾದಿ ಎಂದರೆ ಕೇವಲ ಜಯಗಳ ಸರಣಿ ಅಲ್ಲ. ಅದು ಹಿನ್ನಡೆ, ನಿರಾಸೆ, ದ್ರೋಹ ಮತ್ತು ಮೌನದ ಸಂಗಮ. ಅನೇಕರು ಹಾದಿಯಲ್ಲಿ ಕೈ ಬಿಟ್ಟು ಹೋದರೂ, ಕೆಲವು ಸತ್ಯಗಳು ಎಂದಿಗೂ ಕೈಬಿಡುವುದಿಲ್ಲ. ಅವು ನನ್ನೊಳಗಿನ ಆತ್ಮಧ್ವನಿಯಾಗಿ ಉಳಿದಿವೆ. ಅದೇ ನನ್ನ ನಂಬಿಕೆಯ ಮೂಲ.

ಹೋರಾಟಗಾರನ ಜೀವನದಲ್ಲಿ ವಿರಹ ಅತಿಥಿಯಲ್ಲ, ಶಾಶ್ವತ ಸಂಗಾತಿ. ಜನರು ಹರ್ಷಿಸುತ್ತಿದ್ದಾಗ ನಾನು ಕಣ್ಣೀರನ್ನು ಮರೆಮಾಡುತ್ತಿದ್ದೆ. ಇಂದು ಎಲ್ಲವೂ ಶಾಂತವಾಗಿದೆ, ಆದರೆ ಈ ಮೌನದೊಳಗೆ ನಾನು ನನ್ನ ಹೋರಾಟದ ಉಸಿರು ಕೇಳುತ್ತೇನೆ. ಅದು ಹೇಳುತ್ತದೆ 'ನಿನ್ನ ಹಾದಿ ನಿಂತಿಲ್ಲ, ಅದು ಮತ್ತೊಂದು ರೂಪದಲ್ಲಿ ಸಾಗುತ್ತಿದೆ.'

ಒಮ್ಮೆ ಹೋರಾಟದ ಘೋಷಣೆಯ ಹಿಂದೆ ನಿಂತಿದ್ದ ಜನರು ಇಂದು ಮೌನದ ಗೋಡೆಯ ಹಿಂದೆ ಅಡಗಿದ್ದಾರೆ. ಆದರೆ ನಾನೀಗ ಅವರ ಮೌನದ ಹಿಂದೆ ಇರುವ ಭಯವನ್ನು ಅರ್ಥ ಮಾಡಿಕೊಂಡಿದ್ದೇನೆ. ಬದಲಾವಣೆಯ ಭಯ, ನಂಬಿಕೆಯ ಕೊರತೆ, ಹೋರಾಟದ ಹೊಣೆ. ಈ ಎಲ್ಲವೂ ಜನರ ಕಣ್ಣಲ್ಲಿ ಸ್ಫುರಿಸುತ್ತಿದೆ. ನಾನು ಅವರನ್ನು ತಪ್ಪು ಮಾಡುವವರಾಗಿ ನೋಡಲ್ಲ; ಅವರು ಕಾಲದ ಬಲಿಯಾಗಿದ್ದಾರೆ. ಮನಸ್ಸು ಮೌನವಾದರೂ ಆತ್ಮದೊಳಗೆ ಧ್ವನಿ ಜೀವಂತವಾಗಿದೆ. ಆ ಧ್ವನಿ ನನಗೆ ಪ್ರತಿದಿನ ನೆನಪಿಸುತ್ತದೆ. ಹೋರಾಟ ಕೇವಲ ಬೀದಿಯ ಕೂಗಾಟವಲ್ಲ, ಅದು ಮನಸ್ಸಿನ ಶುದ್ಧತೆಯ ಪಯಣ. ಸತ್ಯದ ಹಾದಿಯಲ್ಲಿ ಒಂಟಿಯಾಗುವದು ಸೋಲು ಅಲ್ಲ, ಅದು ಪರಿಪಕ್ವತೆಯ ಲಕ್ಷಣ.

ನಂಬಿಕೆ ಕಳೆದುಕೊಂಡರೂ ಧೈರ್ಯ ಉಳಿದಿದೆ. ಬೆಂಬಲ ಕಳೆದುಕೊಂಡರೂ ನಿಜ ಉಳಿದಿದೆ. ಈ ನಿಜವೇ ನನ್ನ ಬಲ. ಮೌನದೊಳಗೇ ನನ್ನ ಹೋರಾಟ ಮುಂದುವರಿಯುತ್ತದೆ. ಅಲೆವಾರಿಯುಂತೆಂಯಾದರೂ ಧ್ವನಿಯಿಲ್ಲದ ಕ್ರಾಂತಿಯಾಗಿದೆ.

ನಾನೀಗ ಮೌನದಲ್ಲಿದ್ದರೂ ಸೋಲಿಲ್ಲ. ಏಕೆಂದರೆ ನನ್ನ ಮೌನದಲ್ಲೇ ಒಂದು ಹೋರಾಟದ ಕಥೆ ಜೀವಂತವಾಗಿದೆ. ಕಾಲ ಬದಲಾಗಬಹುದು, ಜನ ಮರೆತುಬಿಡಬಹುದು. ಆದರೆ ಸತ್ಯದ ಹಾದಿಯಲ್ಲಿ ನಡೆದವನ ಹೆಜ್ಜೆ ಗುರುತು ಎಂದಿಗೂ ಅಳಿಯುವುದಿಲ್ಲ. ಹೋರಾಟ ಮುಗಿದಿಲ್ಲ, ಅದು ಮೌನದ ರೂಪದಲ್ಲಿ ಮುಂದುವರಿಯುತ್ತಿದೆ.



ಮನಸ್ಸು ನಿಶ್ಶಬ್ದವಾದರೂ ಆತ್ಮ ಇನ್ನೂ ಕೂಗುತ್ತಿದೆ. 'ನಂಬಿಕೆಯನ್ನು ಕೊಲ್ಲಲಾಗದು!'

–ಸಿಕಂದರ ಎಂ.ಆರಿ.
ಪತ್ರಕರ್ತರು, ನರೇಗಲ್ಲ.

# ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣ ರದ್ದುಗೊಳಿಸಲು ಹೈಕೋರ್ಟ್ ನಕಾರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣವನ್ನು ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ. ಈ ಮೂಲಕ ನ್ಯಾಯಮೂರ್ತಿ ಎಂ.ಐ ಅರುಣ್ ಅವರು, ವಿಚಾರಣಾ ನ್ಯಾಯಾಲಯ ಸಂಜ್ಞೇ (cognisance)ಪರಿಗಣಿಸಿ ಯಡಿಯೂರಪ್ಪ ಅವರಿಗೆ ಸಮನ್ಸ್ ಜಾರಿ ಮಾಡಿದ್ದ ಫೆಬ್ರವರಿ 28ರ ಆದೇಶವನ್ನು ಎತ್ತಿ ಹಿಡಿದಿದ್ದಾರೆ.

ಆದಾಗ್ಯೂ, ಅಗತ್ಯವಿಲ್ಲದೆ ಯಡಿಯೂರಪ್ಪ ಅವರನ್ನು ವಿಚಾರಣೆಗೆ ಕರೆಯಬೇಡಿ ಎಂದು ವಿಚಾರಣಾ ನ್ಯಾಯಾಲಯಕ್ಕೆ ಹೈಕೋರ್ಟ್ ಸೂಚಿಸಿದೆ. ಅಗತ್ಯವಿಲ್ಲದಿದ್ದರೆ ಎ –1 (ಯಡಿಯೂರಪ್ಪ) ಪರವಾಗಿ ಸಲ್ಲಿಸಲಾದ ವಿನಾಯಿತಿ ಅರ್ಜಿಯನ್ನು ವಿಚಾರಣಾ ನ್ಯಾಯಾಲಯ ಪರಿಗಣಿಸುತ್ತದೆ ಎಂದು ತಿಳಿಸಿದೆ.

# ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಬೇಡಿಕೆ: ರಾಷ್ಟ್ರಪತಿ, ಪ್ರಧಾನಿಗೆ ರಾಜು ಕಾಗೆ ಪತ್ರ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಉತ್ತರ ಕರ್ನಾಟಕವು ಪ್ರತಿಯೊಂದು ವಲಯದಲ್ಲೂ ಅನ್ಯಾಯ, ತಾರತಮ್ಯ ಮತ್ತು ನಿರ್ಲಕ್ಷ್ಯವನ್ನು ಎದುರಿಸುತ್ತಿದೆ ಎಂದು ಆರೋಪಿಸಿರುವ ಕಾಂಗ್ರೆಸ್ ಶಾಸಕ ಭರಮಗೌಡ (ರಾಜು) ಕಾಗೆ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದು, ಈ ಪ್ರದೇಶದ 15 ಜಿಲ್ಲೆಗಳಿಗೆ ಪ್ರತ್ಯೇಕ ರಾಜ್ಯದ ಸ್ಥಾನಮಾನ ನೀಡಬೇಕೆಂದು ಒತ್ತಾಯಿಸಿದ್ದಾರೆ.

ಉತ್ತರ ಕರ್ನಾಟಕದ ಜನರ ದಶಕಗಳಷ್ಟು ಹಳೆಯದಾದ ಬೇಡಿಕೆಯನ್ನು ಮತ್ತೆ ಮುನ್ನಲೆಗೆ ತಂದಿರುವ ಕಾಗವಾಡ ಶಾಸಕ ರಾಜು ಕಾಗೆ, ಪ್ರತ್ಯೇಕ ರಾಜ್ಯಕ್ಕಾಗಿ ಉತ್ತರ ಕರ್ನಾಟಕ ಹೋರಾಟ ಸಮಿತಿ ಪ್ರಾರಂಭಿಸಿದ ಸಹಿ ಸಂಗ್ರಹ ಅಭಿಯಾನವನ್ನು ಬೆಂಬಲಿಸುವುದಾಗಿ ಹೇಳಿದ್ದಾರೆ.

"ಆಡಳಿತಾತ್ಮಕ ಅನುಕೂಲತೆ ಮತ್ತು ಸಮಗ್ರ ಅಭಿವೃದ್ಧಿಗಾಗಿ ಉತ್ತರ ಕರ್ನಾಟಕದ 15 ಜಿಲ್ಲೆಗಳಾದ ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಕೊಪ್ಪಳ, ರಾಯಚೂರು, ಉತ್ತರ ಕನ್ನಡ, ಹಾವೇರಿ, ವಿಜಯನಗರ, ಬಳ್ಳಾರಿ ಮತ್ತು ದಾವಣಗೆರೆಗಳನ್ನು ಒಳಗೊಂಡ ಹೊಸ ರಾಜ್ಯವನ್ನು ರಚಿಸಬೇಕೆಂಬ ನನ್ನ ಬಲವಾದ ಬೇಡಿಕೆಯನ್ನು ವ್ಯಕ್ತಪಡಿಸಲು ನಾನು ಬಯಸುತ್ತೇನೆ" ಎಂದು ರಾಜು ಕಾಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ಮೋದಿ ಮತ್ತು ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

ನವೆಂಬರ್ 4ರಂದು ರಾಜು ಕಾಗೆ ಬರೆದ ಪತ್ರವನ್ನು ಅವರ ಕಚೇರಿ ಬುಧವಾರ (ನ.12) ಬಿಡುಗಡೆ ಮಾಡಿದೆ.

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾಗಿರುವ ಕಾಗೆ, ಈ ಹಿಂದೆ ರಾಜ್ಯ ಸರ್ಕಾರವನ್ನು ಸಾರ್ವಜನಿಕವಾಗಿ ಟೀಕಿಸಿದ್ದರು. ಅಭಿವೃದ್ಧಿ ಮತ್ತು ಹಣದ ಕೊರತೆಯ ಬಗ್ಗೆ ದೂರಿ ವಿಧಾನಸಭೆಯ ಸದಸ್ಯತ್ವವನ್ನು ತ್ಯಜಿಸುವುದಾಗಿ ಬೆದರಿಕೆ ಹಾಕಿದ್ದರು.

ಕಳೆದ ಸೆಪ್ಟೆಂಬರ್‌ನಲ್ಲಿ, ಉತ್ತರ ಕರ್ನಾಟಕ ಪ್ರದೇಶಕ್ಕೆ ಕಿತ್ತೂರು ಕರ್ನಾಟಕ ಎಂಬ ಪ್ರತ್ಯೇಕ ರಾಜ್ಯ ಸ್ಥಾನವನ್ನು ಕೋರುವುದರಲ್ಲಿ ಯಾವುದೇ ತಪ್ಪಿಲ್ಲ, ಏಕೆಂದರೆ ಕಿತ್ತೂರು ಕರ್ನಾಟಕ ಪ್ರದೇಶದ ಕೆಲವು ಸ್ಥಳಗಳನ್ನು ಹೊರತುಪಡಿಸಿ, ಅದು ಕಲ್ಯಾಣ ಕರ್ನಾಟಕ ಪ್ರದೇಶದಂತೆ ಅಭಿವೃದ್ಧಿ ಹೊಂದಿಲ್ಲ ಎಂದು ರಾಜು ಕಾಗೆ ಹೇಳಿದ್ದರು.

# ವಿಜೃಂಭಣೆಯ ಶ್ರೀ ವೀರಭದ್ರೇಶ್ವರ–ಭದ್ರಕಾಳಿ ವಿವಾಹ




■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಿರೇಮಠದಲ್ಲಿ ನಡೆದಿರುವ ಜಾತ್ರಾ ಮಹೋತ್ಸವದಲ್ಲಿ 4ನೇ ದಿನವಾದ ಬುಧವಾರ ಶ್ರೀ ವೀರಭದ್ರ ದೇವರು ಮತ್ತು ಭದ್ರಕಾಳಿಯರ ವಿವಾಹ ಮಹೋತ್ಸವವು ಅತ್ಯಂತ ವಿಜೃಂಭಣೆಯಿಂದ ಜರುಗಿತು. ಮಲ್ಲನಗೌಡ ಪಾಟೀಲ ದಂಪತಿಗಳು ವರನ ಕಡೆಯವರಾದರೆ, ಪ್ರಶಾಂತ ಜುಟ್ಲ ದಂಪತಿಗಳು ವಧುವಿನ ಕಡೆಯವರಾಗಿ ಶಾಸ್ತ್ರಬದ್ಧವಾದ ಮದುವೆಯನ್ನು ನಡೆಸಿಕೊಟ್ಟರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಶ್ರೀ ವೀರಭದ್ರ ಮತ್ತು ಭದ್ರಕಾಳಿಯರ ಮದುವೆಯ ಸನ್ನಿವೇಶವನ್ನು ರಸವತ್ತಾಗಿ ವಿವರಿಸಿದರು. ಇಂದಿನ ಈ ಮದುವೆ ಅಲೌಕಿಕ ವ್ಯಕ್ತಿಗಳದ್ದಾಗಿದ್ದರೂ, ಲೌಕಿಕ ವ್ಯಕ್ತಿಗಳ ಮದುವೆ ಹೇಗಾಗುತ್ತದೆಯೋ ಹಾಗೆಯೆ ನಿಭಾಯಿಸಿದ್ದನ್ನು ಕಂಡು ನಮಗೆ ತುಂಬಾ ಸಂತಸವಾಗಿದೆ. ಇಂತಹ ಧಾರ್ಮಿಕ ಕಾರ್ಯಗಳು ಊರಿನಲ್ಲಿ ಮೇಲಿಂದ ಮೇಲೆ ನಡೆಯುತ್ತಿದ್ದರೆ ಊರು ಮತ್ತು ಜನತೆ ಸಮೃದ್ಧವಾಗಿ, ಸುಖ, ಸಂತೋಷ, ನೆಮ್ಮದಿಯಿಂದ ಬಾಳುತ್ತಾರೆ. ಎಲ್ಲಿ ಧಾರ್ಮಿಕ ಮತ್ತು ಆಧ್ಯಾತ್ಮಿಕ ಕಾರ್ಯಗಳು ನಡೆಯುತ್ತವೆಯೋ ಅಲ್ಲಿ ದೇವಾನುದೇವತೆಗಳು ನೆಲೆಸಿರುತ್ತಾರೆ. ಆದ್ದರಿಂದ ಇಂತಹ ಕಾರ್ಯಗಳಿಗೆ ಹೆಚ್ಚಿನ ಗಮನ ನೀಡಿ, ಶ್ರದ್ಧೆಯಿಂದ ಪಾಲ್ಗೊಳ್ಳಿರಿ ಎಂದರು.

ತಾ.ಪಂ. ಮಾಜಿ ಸದಸ್ಯ ಸಂದೇಶ ದೊಡ್ಡಮೇಟಿ ಮಾತನಾಡಿ, ಇಂದು ಇಂತಹ ಅಪರೂಪದ ಸನ್ನಿವೇಶವನ್ನು ಕಾಣುವ ಸುಯೋಗ ನಮಗೆ ಒದಗಿ ಬಂದಿದೆ. ಇಂತಹ ಅವಕಾಶವನ್ನು ಸೃಷ್ಟಿಸಿಕೊಟ್ಟ ಶ್ರೀಗಳವರಿಗೆ ನಾವು ಅದೆಷ್ಟು ಕೃತಜ್ಞರಾಗಿದ್ದರೂ ಕಡಿಮೆ. ಇಂತಹ ಕಾರ್ಯಕ್ರಮಗಳು ಕಣ್ಮರೆಯಾಗುತ್ತಿರುವ ಇಂದಿನ ದಿನಗಳಲ್ಲಿ ನರೇಗಲ್ಲ ಪಟ್ಟಣದ ಜನತೆ ಈ ಕಾರ್ಯ ನೆರವೇರಿಸಿದ್ದು ವಿಶೇಷ ಆನಂದವನ್ನು ನೀಡಿದೆ ಎಂದರು. ವೇದಿಕೆಯ ಮೇಲೆ ಚಂದ್ರಶೇಖರಯ್ಯ ಭುಸನೂರಮಠ, ಚನ್ನಬಸಪ್ಪ ಗೋದಿ, ವೀರೇಶ ನೇಗಲಿ ಉಪಸ್ಥಿತರಿದ್ದರು. ವಿವಾಹ ಕಾರ್ಯವನ್ನು ರುದ್ರಮುನಿ ಸ್ವಾಮಿ ಹಿರೇಮಠ ಮತ್ತು ರುದ್ರಯ್ಯ ಸೊಬರದ ನಡೆಸಿಕೊಟ್ಟರು. ಶಿವಾನಂದ ಹಿರೇಮಠ ಸ್ವಾಗತಿಸಿದರು. ಶಿಕ್ಷಕ ಸುರೇಶ ಹಳ್ಳಿಕೇರಿ ನಿರೂಪಿಸಿದರು.

# ಅಧ್ಯಕ್ಷರಾಗಿ ಅಶೋಕ ಸೊರಟೂರ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಅಶೋಕ ಸೊರಟೂರ ಅವಿರೋಧ ಆಯ್ಕೆಯಾಗಿದ್ದಾರೆ. ಪರಮೇಶ ಲಮಾಣಿ ಕಾರ್ಯದರ್ಶಿ, ಸೋಮಣ್ಣ ಯತ್ನಳ್ಳಿ ಮತ್ತು ಶಿವಲಿಂಗಯ್ಯ ಹೊತ್ತಿಗಿಮಠ (ಉಪಾಧ್ಯಕ್ಷರು), ನಾಗರಾಜ ಹಣಗಿ (ಖಜಾಂಚಿ), ರಮೇಶ ನಾಡಿಗೇರ ಗೌರವಾಧ್ಯಕ್ಷರಾಗಿ ಆಯ್ಕೆ ಆಗಿದ್ದಾರೆ.

ಆಯ್ಕೆ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಮಲ್ಲಿಕಾರ್ಜುನ ಕಳಸಾಪುರ, ದಿಗಂಬರ ಪೂಜಾರ, ಕರಿಯಪ್ಪ ಶಿರಹಟ್ಟಿ, ಮಂಜುನಾಥ ರಾಠೋಡ ಇದ್ದರು.

## 'ಆತ್ಮನಿರ್ಭರ ಭಾರತ ಸಾಧನೆಗೆ ವಾಹಕಗಳಾಗಿ ಸಹಕಾರ ಸಂಸ್ಥೆಗಳು'

# 72ನೇ ಅಖಿಲ ಭಾರತ ಸಹಕಾರ ಸಪ್ತಾಹ

■ ವಿಜಯಸಾಕ್ಷಿ ಸುದ್ದಿ, ಗದಗ

72ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ನವೆಂಬರ್ 14ರಿಂದ 20ರವೆಗೆ ದೇಶವ್ಯಾಪಿ ಆಚರಿಸಲಾಗುತ್ತಿದೆ. ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್, ಕೆ.ಸಿ.ಸಿ. ಬ್ಯಾಂಕ್ ಧಾರವಾಡ, ಕೆ.ಎಂ.ಎಫ್ ಧಾರವಾಡ, ಗದಗ ಉಪವಿಭಾಗ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಸಂಭಾಪೂರ ಹಾಗೂ ಗದಗ ತಾಲೂಕಿನ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ನಡೆಯಲಿದೆ.

ನ. 14ರಂದು ಬೆಳಿಗ್ಗೆ 8 ಗಂಟೆಗೆ ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷ ಸಿ.ಎಂ. ಪಾಟೀಲ ನಗರದ ಟ್ಯಾಗೋರ್ ರಸ್ತೆಯ ಗದಗ ಜಿಲ್ಲಾ ಸಹಕಾರ ಯೂನಿಯನ್ ಆವರಣದಲ್ಲಿ ಸಹಕಾರ ಧ್ವಜಾರೋಹಣ ಮಾಡಲಿದ್ದಾರೆ. ಬೆಳಿಗ್ಗೆ 11 ಗಂಟೆಗೆ 'ಕಾರ್ಯದಕ್ಷತೆ ಉತ್ತರದಾಯಿತ್ವ ಮತ್ತು ಪಾರದರ್ಶಕತೆಯನ್ನು ಹೆಚ್ಚಿಸಲು ಡಿಜಿಟಲೀಕರಣವನ್ನು ಪ್ರೋತ್ಸಾಹಿಸುವುದು' ವಿಷಯದ ಕುರಿತ ಕಾರ್ಯಕ್ರಮವನ್ನು ದುರ್ಗಾದೇವಿ ಸಮುದಾಯ ಭವನ ಸಂಭಾಪುರ ಇಲ್ಲಿ ಹಮ್ಮಿಕೊಳ್ಳಲಾಗಿದೆ.

ನ. 15ರಂದು ಬೆಳಿಗ್ಗೆ 11 ಗಂಟೆಗೆ 'ಸಂಶೋಧನೆ ಮತ್ತು ತರಬೇತಿಯಿಂದ ಸಹಕಾರ ಶಿಕ್ಷಣದಲ್ಲಿ ಪರಿವರ್ತನೆ' ಕುರಿತ ಕಾರ್ಯಕ್ರಮವನ್ನು ರೋಣ ತಾಲೂಕಿನ ಮಲ್ಲಾಪೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ನ. 16ರಂದು ಬೆಳಿಗ್ಗೆ 10 ಗಂಟೆಗೆ 'ಸಹಕಾರ ಸಂಸ್ಥೆಗಳ ಮೂಲಕ ಗ್ರಾಮೀಣ ಅಭಿವೃದ್ಧಿಯ ಬಲವರ್ಧನೆ' ಕುರಿತ ಕಾರ್ಯಕ್ರಮವನ್ನು ಮರ್ಚಂಟ್ಸ್ ಲಿಬರಲ್ ಕೋ–ಆಪ್ ಬ್ಯಾಂಕ್ ಗದಗ ಮಕಾನಗಲ್ಲಿ ಇದರ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ನ. 17ರಂದು ಬೆಳಿಗ್ಗ 11 ಗಂಟೆಗೆ ಲಕ್ಷ್ಮೇಶ್ವರ ತಾಲೂಕಿನ ಅಡರಕಟ್ಟಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಭಾಭವನದಲ್ಲಿ 'ರಾಷ್ಟ್ರೀಯ ಸಹಕಾರ ನೀತಿಯ ಪರಿಸರ ವ್ಯವಸ್ಥೆ–ಭಾರತದ ಸಹಕಾರ ಸಂಸ್ಥೆಗಳಿಗೆ ರಚನಾತ್ಮಕ ಮಾರ್ಗಸೂಚಿ' ಕುರಿತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನ. 18ರಂದು ಬೆಳಿಗ್ಗೆ 11 ಗಂಟೆಗೆ ಮುಂಡರಗಿಯ ಕೆ.ಸಿ.ಸಿ. ಬ್ಯಾಂಕ್ ಸಭಾಭವನದಲ್ಲಿ 'ಸಹಕಾರಿ ಉದ್ಯಮ ಶೀಲತೆಯಿಂದ ಯುವಜನ, ಮಹಿಳಾ ಮತ್ತು ಅಬಲ ವರ್ಗದ ಸಬಲೀಕರಣ (ಕರಕುಶಲ, ಕೈಮಗ್ಗ, ಕಾರ್ಮಿಕ, ಮೀನುಗಾರಿಕೆ) ಕುರಿತು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ನ. 19ರಂದು ಬೆಳಿಗ್ಗೆ 11 ಗಂಟೆಗೆ ಗಜೇಂದ್ರಗಡ ತಾಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಹಾಲಕೆರೆ ಆವರಣದಲ್ಲಿ ಪ್ರವಾಸೋದ್ಯಮ, ಆರೋಗ್ಯ, ಹಸಿರು ಇಂಧನ, ಪ್ಲಾಟ್‌ಫಾರಂ, ಸಹಕಾರಿ ಸಂಸ್ಥೆಗಳು, ಕಿಚನ್ ಸಹಕಾರ ಸಂಘಗಳು ಮತ್ತಿತರ ಉದಯೋನ್ಮುಖ ಸಹಕಾರ ಸಂಘಗಳನ್ನು ಅನುಕೂಲಕರ ಪ್ರದೇಶಗಳಿಗೆ ವಿಸ್ತರಣೆ ಕುರಿತು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ನ. 20ರಂದು ಬೆಳಿಗ್ಗೆ 11 ಗಂಟೆಗೆ ನರಗುಂದ ತಾಲೂಕಿನ ಹುಣಸೀಕಟ್ಟಿ ಗ್ರಾಮ ಪಂಚಾಯಿತಿ ಸಮುದಾಯ ಭವನದಲ್ಲಿ 'ಜಾಗತಿಕ ಸ್ಪರ್ಧಾತ್ಮಕತೆಗಾಗಿ ನವನಾವೀನ್ಯತೆಯ ಸಹಕಾರಿ ವ್ಯವಹಾರದ ಮಾದರಿಗಳು' ಕುರಿತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಶ್ರೀ ವೀರಭದ್ರೇಶ್ವರ ದೇವರ ಜಾತ್ರೆ ನ. 16ರಿಂದ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ರಣ-ತೂರ ಗ್ರಾಮದಲ್ಲಿ ನ.16ರಿಂದ ಶ್ರೀ ವೀರಭದ್ರೇಶ್ವರ ದೇವರ 7ನೇ ವರ್ಷದ ಜಾತ್ರಾಮಹೋತ್ಸವ ಜರುಗಲಿದೆ. ಬೆಳಿಗ್ಗೆ ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ವೀರಭದ್ರೇಶ್ವರ ದೇವರ ಮೂರ್ತಿಗೆ ಮಹಾರುದ್ರಾಭಿಷೇಕ, 8.30ಕ್ಕೆ ಜಾತ್ರೆಯ ಧರ್ಮಧ್ವಜಾರೋಹಣ ನಡೆಯಲಿದೆ. ನ.17ರ ಸಂಜೆ 5ಗಂಟೆಗೆ ಶ್ರೀ ವೀರಭದ್ರೇಶ್ವರ ಸ್ವಾಮಿಯ ಲಘುರಥೋತ್ಸವ, ರಾತ್ರಿ 8 ಗಂಟೆಗೆ ಧರ್ಮಸಭೆ ಜರುಗಲಿದ್ದು, ಸಾನ್ನಿಧ್ಯವನ್ನು ಬನ್ನಿಕೊಪ್ಪ ಜಪದಕಟ್ಟೆ-ಮೈಸೂರಿನ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ, ಬೆಳ್ಳಟ್ಟಿ ಶ್ರೀ ರಾಮಲಿಂಗೇಶ್ವರ ದಾಸೋಹಮಠದ ಬಸವರಾಜ ಸ್ವಾಮೀಜಿ, ನರೇಗಲ್‌ನ ಮಲ್ಲಿಕಾರ್ಜುನ ಸ್ವಾಮೀಜಿ, ಸಂಕದಾಳದ ವಾಗೀಶ ಹಾಲಶಿವಯೋಗಿ ಸ್ವಾಮೀಜಿ ವಹಿಸುವರು.

ಅಧ್ಯಕ್ಷತೆಯನ್ನು ರಣತೂರಿನ ಚಂದ್ರಶೇಖರ ಚನ್ನವೀರಯ್ಯ ಹಿರೇಮಠ ವಹಿಸಲಿದ್ದಾರೆ. ದಿಕ್ಸೂಚಿ ಭಾಷಣವನ್ನು ರಾಷ್ಟ್ರೀಯ ಚಿಂತಕ ಡಾ. ಮಲ್ಲಿಕಾರ್ಜುನ ಬಾಳಿಕಾಯಿ ನೀಡಲಿದ್ದಾರೆ. ರಾತ್ರಿ 10 ಗಂಟೆಗೆ ಕೊಂಚಿಗೇರಿಇಯ ಜನರಂಗ ಕಲಾತಂಡದ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ನ.18ರಂದು ಶ್ರೀ ವೀರಭದ್ರೇಶ್ವರ ದೇವರ ಅಗ್ನಿ ಮಹೋತ್ಸವ, ಮಧ್ಯಾಹ್ನ 12 ಗಂಟೆಗೆ ಮಹಾಪ್ರಸಾದ ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕೆಂದು ಸಮಿತಿಯು ಪ್ರಕಟಣೆಯಲ್ಲಿ ತಿಳಿಸಿದೆ.

**ಅಧಿಸೂಚಿತ ಬೆಳೆಗಳಿಗೆ ನೋಂದಣಿ ಮಾಡಿಸಲು ಸರಕಾರದಿಂದ ಅಧಿಸೂಚನೆ**

# 2025-26ರ ಹಿಂಗಾರು ಬೆಳೆವಿಮೆ ಜಾರಿ



■ ವಿಜಯಸಾಕ್ಷಿ ಸುದ್ದಿ, ಗದಗ

2025-26ರ ಹಿಂಗಾರು ಹಾಗೂ ಬೇಸಿಗೆ ಹಂಗಾಮಿಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ರೈತರು ಅಧಿಸೂಚಿತ ಬೆಳೆಗಳಿಗೆ ನೋಂದಣಿ ಮಾಡಿಸಲು ಸರಕಾರವು ಅಧಿಸೂಚನೆಯನ್ನು ಹೊರಡಿಸಿದೆ.

ಅಧಿಸೂಚಿತ ಬೆಳೆಗೆ ಬೆಳೆಸಾಲ ಪಡೆದ ರೈತರಿಗೆ ಈ ಯೋಜನೆಯು ಕಡ್ಡಾಯವಾಗಿದ್ದು, ಬೆಳೆಸಾಲ ಪಡೆದ ರೈತರು, ಯೋಜನೆಯಡಿ ಭಾಗವಹಿಸಲು ಇಚ್ಛಿಸದಿದ್ದಲ್ಲಿ, ಈ ಕುರಿತು ಬೆಳೆಸಾಲ ಪಡೆದ ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆವಿಮೆ ನೋಂದಣಿ ಅಂತಿಮ ದಿನಾಂಕದಿಂದ 7 (ಏಳು) ದಿನಕ್ಕಿಂತ ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆವಿಮೆ ಯೋಜನೆಯಿಂದ ಕೈ ಬಿಡಲಾಗುವುದು. ಬೆಳೆಸಾಲ ಪಡೆಯದ ರೈತರಿಗೆ ಬೆಳೆವಿಮೆ ಯೋಜನೆಯು ಐಚ್ಛಿಕವಾಗಿರುತ್ತದೆ.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಗೆ ಓರಿಯಂಟಲ್ ಜನರಲ್ ಇನ್ಶೂರೆನ್ಸ್ ಕಂ. ಲಿ. ಅನುಷ್ಠಾನ ವಿಮಾ ಸಂಸ್ಥೆಯಾಗಿ ಆಯ್ಕೆಯಾಗಿದೆ. ಆಸಕ್ತ ರೈತರು ಬೆಳೆವಿಮೆ ತುಂಬಲು ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಬೆಳೆ ವಿಮೆತುಂಬಲು ಜಂಟಿಕೃಷಿ ನಿರ್ದೇಶಕರು ತಿಳಿಸಿದ್ದಾರೆ. ಬೆಳೆ ವಿಮೆ ಮಾಡಿಸುವ ರೈತರು ಈ FRUITS ಈ ಈಖಆಅನ್ನು ಹೊಂದಿರುವುದು ಕಡ್ಡಾಯವಾಗಿರುತ್ತದೆ. ರೈತರು ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ/ಖಾತೆ ಪುಸ್ತಕ/ಕಂದಾಯ ರಶೀದಿಯನ್ನು ಸಂಬಂಧಿಸಿದ ಬ್ಯಾಂಕ್, ಹತ್ತಿರದ ಸಾರ್ವಜನಿಕ ಸೇವಾಕೇಂದ್ರ (Common Service Center), ಗ್ರಾಮಒನ್ ಕೇಂದ್ರಗಳಲ್ಲಿ ನೀಡಿ ಸಂರಕ್ಷಣೆ ಪೋರ್ಟಲ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ/ತಾಲೂಕು ಸಯಾಯಕ ಕೃಷಿ ನಿರ್ದೇಶಕರ ಕಛೇರಿ ಸಂಬಂಧಿಸಿದ ವಿಮಾ ಸಂಸ್ಥೆಯ ಗದಗ ಶಾಖೆಯನ್ನು ಸಂಪರ್ಕಿಸಲು ತಿಳಿಸಿದೆ.

ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ, ಭೂಕುಸಿತ, ಬೆಳೆ ಮುಳುಗಡೆ, ಮೇಘಸ್ಫೋಟ, ಗುಡುಗು ಮಿಂಚು ಹಾಗೂ ಬೆಂಕಿ ಅವಗಡಗಳಿಂದ ಉಂಟಾಗುವ ಬೆಳೆನಷ್ಟದ ನಿರ್ಧಾರವನ್ನು ವಯಕ್ತಿಕವಾಗಿ ನಿರ್ಧರಿಸಿ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಯೋಜನೆಯಡಿ ಅವಕಾಶನೀಡಲಾಗಿದೆ. ಇಂತಹ ಸಂದರ್ಭದಲ್ಲಿ ವಿಮೆ ಮಾಡಿಸಿರುವ ರೈತರು ಈ ಬಗ್ಗೆ ನೇರವಾಗಿ ಸಂಬಂಧಪಟ್ಟ ವಿಮಾ ಸಂಸ್ಥೆಗಳ ಕಛೇರಿಗಳಿಗೆ ನೇರವಾಗಿ ಅಥವಾ ಬ್ಯಾಂಕ್/ಕೃಷಿ/ತೋಟಗಾರಿಕೆ ಇಲಾಖೆ ಮುಖಾಂತರ 72 ಗಂಟೆಗಳೊಳಗಾಗಿ ಲಿಖಿತವಾಗಿ ಅಥವಾ ವಿಮಾ ಸಂಸ್ಥೆಯ ಉಚಿತ ದೂರವಾಣಿ (Toll Free)ಸಂಖ್ಯೆಗೆ ಕರೆ ಮಾಡಿ ಸೂಚನೆ ನೀಡಬೇಕು.

ರೈತರು ತಮ್ಮ ಜಮೀನಿನಲ್ಲಿ ಬಿತ್ತಿದ ಬೆಳೆಯನ್ನು ಮಾತ್ರ ಅರ್ಜಿಯಲ್ಲಿ ನಮೂದಿಸಬೇಕು. ರೈತರು ಸ್ವತಃ ತಾವೇ ಖುದ್ದಾಗಿ ಬೇಟಿ ನೀಡಿ ಅರ್ಜಿ ಸಲ್ಲಿಸಬೇಕು, ಒಂದು ವೇಳೆ ಭೂ ಮಾಲಿಕರ ಕುಟುಂಬದ ಇತರೆ ಸದಸ್ಯರು ಬೆಳೆ ವಿಮೆಗೆ ನೋಂದಣಿ ಮಾಡುವದು ಇದ್ದಲ್ಲಿ ಭೂ ಮಾಲಿಕರಿಂದ ನಿರಕ್ಷೇಪಣಾ ಪತ್ರ (NOC)ಮತ್ತು ಮೂಲ (Original) ಆಧಾರ ಪ್ರತಿಯನ್ನು ಸಲ್ಲಿಸಬೇಕು. ಬಿತ್ತಿದ ಬೆಳೆಯು ಮಳೆ ಆಶ್ರಿತವೋ ಅಥವಾ ನೀರಾವರಿ ಬೆಳೆಯೋ ಎಂಬುದನ್ನು ಸ್ಪಷ್ಟವಾಗಿ ನಮೂದಿಸಬೇಕು, ಬಿತ್ತಿದ ಬೆಳೆಯು 30 ದಿನಗಳದ್ದಾಗಿರಬೇಕು ಹಾಗೂ ಸಧೃಡವಾಗಿರಬೇಕು, ಬಿತ್ತನೆ ಮಾಡಿದ ಬೆಳೆಯ ಕುರಿತು ಸ್ವಯಂ ಧೃಡೀಕರಣ ನೀಡಬೇಕು. ಬೆಳೆ ಸಮೀಕ್ಷೆ ಕಡ್ಡಾಯ ವಾಗಿರುವದರಿಂದ ಬಿತ್ತದೆ ಇರುವ ಬೆಳೆಯನ್ನು ವಿಮೆ ಮಾಡಿಸಿದಲ್ಲಿ ಬೆಳೆ ವಿಮೆ ಪರಿಹಾರ ಪಡೆಯಲು ಅರ್ಹವಾಗುವದಿಲ್ಲ.

ಹೆಚ್ಚಿನ ಮಾಹಿತಿಗಾಗಿ: ಗದಗ ತಾಲೂಕು-ಉಮೇಶ ಹುಬ್ಬಳ್ಳಿ-9482061344, ಗಜೇಂದ್ರಗಡ ತಾಲೂಕು- ಫಕಿರಸಾಬ-91640 98169, ಲಕ್ಷ್ಮೇಶ್ವರ ತಾಲೂಕು-ಶಂಕರಗೌಡ ಪಾಟೀಲ -9591910078, ಮುಂಡರಗಿ ತಾಲೂಕು-ಕನಕಕುಮಾರ ಬೆಲ್ಲದ-9611267933 ನರಗುಂದ ತಾಲೂಕು-ಕರಿಯಪ್ಪ ಹೀರೆಕುರುಬರ- 9742603652, ರೋಣ ತಾಲೂಕು-ಮಂಜುನಾಥ ಚಟ್ಟಿ-9611317070, ಶಿರಹಟ್ಟಿ ತಾಲೂಕು-ಮಂಜುನಾಥ ಇಳಿಗೇರ-7760294391 ಇವರನ್ನು ಸಂಪರ್ಕಿಸಲು ಕೋರಿದೆ.

# ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮೆಕ್ಕೆಜೋಳ ಬೆಳೆಗೆ ಬೆಂಬಲ ಬೆಲೆ ನಿಗದಿಯಾಗಿದ್ದು, ತಕ್ಷಣವೇ ಖರೀದಿ ಕೇಂದ್ರ ಪ್ರಾರಂಭಿಸಬೇಕೆಂದು ಆಗ್ರಹಿಸಿ ಗುರುವಾರ ಶಿರಹಟ್ಟಿ ತಾಲೂಕು ಸಮಗ್ರ ರೈತ ಹೋರಾಟ ಸಮಿತಿ ವತಿಯಿಂದ ತಹಸೀಲ್ದಾರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂತೋಷ ಕುರಿ, ಜಿಲ್ಲೆಯಲ್ಲಿ ಅತಿ ಹೆಚ್ಚು ಕ್ಷೇತ್ರದಲ್ಲಿ ಮೆಕ್ಕೆಜೋಳವನ್ನು ಮುಂಗಾರು ಹಂತದಲ್ಲಿ ಬಿತ್ತನೆ ಮಾಡಿದ್ದು, ಅ.15ರಿಂದ ಇಲ್ಲಿಯವರೆಗೆ ರೈತರು ಬೆಳೆ ಕಟಾವು ಮಾಡುತ್ತಿದ್ದು, ಮುಂದೆಯೂ ಕೆಲವರು ಮಾಡುತ್ತಿದ್ದಾರೆ. ಈ ಸಂದರ್ಭದಲ್ಲಿ ಖಾಸಗಿ ಖರೀದಿದಾರರಿಂದ ರೈತರ ಆರ್ಥಿಕ ಪರಿಸ್ಥಿತಿ ಗಂಭೀರವಾಗುತ್ತಿದೆ. ಆದ್ದರಿಂದ ಪ್ರತಿ ಕ್ವಿಂಟಾಲ್‌ಗೆ ರಾಜ್ಯ ಸರಕಾರದ 600 ರೂ ಪ್ರೋತ್ಸಾಹಧನ ಹಾಗೂ 2400 ರೂ ಬೆಂಬಲ ಬೆಲೆ ಸೇರಿದಂತೆ ಪ್ರತಿ ಕ್ವಿಂಟಾಲ್‌ಗೆ 3 ಸಾವಿರ ರೂ ಸಿಗುವ ಹಾಗೆ ವ್ಯವಸ್ಥೆ ಮಾಡಬೇಕೆಂದು ಮನವಿ ಮೂಲಕ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖಂಡ ರವಿಕಾಂತ ಅಂಗಡಿ, ಗೂಳಪ್ಪ ಕರಿಗಾರ, ಎಸ್.ಎಸ್. ಪಾಟೀಲ, ಸಂದೀಪ ಕಪ್ಪತ್ತನವರ, ಎಸ್.ಎಸ್. ಪಾಟೀಲ, ಸುರೇಶ ಹವಳದ, ತಿಪ್ಪಣ್ಣ ಕೊಂಚಿಗೇರಿ, ಪರಶುರಾಮ ಡೊಂಕಬಳ್ಳಿ, ರವಿ ಹಳ್ಳಿ, ಫಕ್ಕೀರೇಶ ಸಂಶಿಮಠ, ಶಿವಾನಂದ ಬಟ್ಟೂರ, ಬಸವರಾಜ ಕಲ್ಯಾಣಿ ಮುಂತಾದವರು ಉಪಸ್ಥಿತರಿದ್ದರು.

**ಜನರ ಮೇಲೆ ದಬ್ಬಾಳಿಕೆ ನಡೆಸುತ್ತಿರುವ ಭೂ ಮಾಲಿಕನ ಬಂಧನಕ್ಕೆ ಆಗ್ರಹ**

# ಸ್ಲಂ ಸಮಿತಿಯಿಂದ ಡಿಸಿ ಕಚೇರಿಯೆದುರು ಪ್ರತಿಭಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರ ವ್ಯಾಪ್ತಿಯಲ್ಲಿ ಬರುವ ನವನಗರ ಸ್ಲಂ ಪ್ರದೇಶದ ರಿ.ಸ. ನಂ 594 ಆಸ್ತಿಯಲ್ಲಿ ಸುಮಾರು 78ಕ್ಕೂ ಹೆಚ್ಚು ಬಡವರು, ಕೂಲಿ ಕಾರ್ಮಿಕರು ಸುಮಾರು 25 ವರ್ಷಗಳಿಂದ ವಾಸವಾಗಿದ್ದಾರೆ. ಈ ಹಿಂದೆ ಸ್ಥಳೀಯ ಜನರಿಗೆ ನಿವೇಶನಗಳನ್ನು ಮಾರಾಟ ಮಾಡಿರುವ ಭೂ ಮಾಲಿಕ ಬಡ ಜನರನ್ನು ಒಕ್ಕಲೆಬ್ಬಿಸುವ ಕುತಂತ್ರ ನಡೆಸುತ್ತಿರುವುದನ್ನು ಖಂಡಿಸಿ, ಬಡ ಜನರಿಗೆ ಪದೇ-ಪದೇ ತೊಂದರೆ ನೀಡುತ್ತಿರುವ ಭೂ ಮಾಲಿಕನ ಬಂಧನಕ್ಕೆ ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಸ್ಲಂ ನಿವಾಸಿಗಳು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಗೆ ಬರುವ ವಾರ್ಡ್ ಸಂಖ್ಯೆ:21, ರಹಮತ ನಗರ ಹತ್ತಿರ, ಗಂಗಿಮಡಿ ಮುಖ್ಯ ರಸ್ತೆಯಲ್ಲಿರುವ ನವನಗರ ಸ್ಲಂ ಪ್ರದೇಶದ ರಿ.ಸ.ನಂ 594ರಲ್ಲಿಯ 2 ಎಕರೆ 39 ಗುಂಟೆ ಜಾಗೆಯಲ್ಲಿ ಭೂ ಮಾಲಿಕ ದತ್ತಾತ್ರೇಯ ಭಾಂಡಗೆ ಎಂಬುವನು 1999-2000, 2001 ಹಾಗೂ 2009ರಲ್ಲಿ ಗದಗ-ಬೆಟಗೇರಿ ನಗರದ ಬಡ ಹಾಗೂ ಕೂಲಿಕಾರ ಕುಟುಂಬಗಳಿಗೆ ಸುಮಾರು 78 ನಿವೇಶನಗಳನ್ನು ಮಾರಾಟ ಮಾಡಿರುತ್ತಾನೆ.

ಆದರೆ ಇದೀಗ, ಭೂ ಮಾಲಿಕ ಸ್ಥಳೀಯ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಮನೆಗಳನ್ನು ತೆರವುಗೊಳಿಸುತ್ತೇನೆ. ಈ ಜಾಗೆ ಬಿಟ್ಟು ಹೋಗಿ ಎಂದು ಪದೇ ಪದೇ ಜನರ ಮೇಲೆ ದೌರ್ಜನ್ಯ ನಡೆಸುತ್ತಿದ್ದು, ಕೂಡಲೇ ಭೂ ಮಾಲಿಕನನ್ನು ಬಂಧಿಸಿ ಸ್ಲಂ ಜನರಿಗೆ ನ್ಯಾಯ ಕೊಡಬೇಕೆಂದು ಒತ್ತಾಯಿಸಿದರು.

ಮೋಹನ ಭಜಂತ್ರಿ ವಕೀಲರು ಮಾತನಾಡಿ, ನವನಗರ ಸ್ಲಂ ಪ್ರದೇಶದ ಕುಟುಂಬಗಳು ಭೂ ಮಾಲಿಕ ದತ್ತಾತ್ರೇಯ ಭಾಂಡಗೆ ಹತ್ತಿರ ನಿವೇಶನಗಳನ್ನು ಪಡೆದಿರುವ ದಾಖಲೆಗಳು, ಸ್ಥಳೀಯವಾಗಿ ವಾಸಿಸುತ್ತಿರುವ ದಾಖಲೆಗಳು, ಪ್ರಧಾನ ಮಂತ್ರಿ ಆವಾಸ್ ಯೋಜನೆಯಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿರುವ ಫಲಾನುಭವಿಗಳ ಮನೆ ಮಂಜೂರಾತಿ ಪತ್ರಗಳು, ವಿದ್ಯುತ್ ಬಿಲ್‌ಗಳು ಸೇರಿದಂತೆ ಹಲುವಾರು ದಾಖಲೆಗಳನ್ನು ಪಡೆದುಕೊಂಡಿದ್ದಾರೆ. ಇದೀಗ ಬಡವರ ಭೂಮಿಯನ್ನು ಬಲವಂತವಾಗಿ ಕಿತ್ತುಕೊಳ್ಳುವ ಹುನ್ನಾರ ನಡೆದಿದೆ. ಜನರಿಗೆ ಅವರ ಕನಸಿನ ಮನೆಗಳನ್ನು ನಿರ್ಮಿಸಿಕೊಳ್ಳಲು ಅವಕಾಶ ಕಲ್ಪಿಸಿ ಭೂ ಮಾಲಿಕನನು ಬಂಧಿಸಬೇಕೆಂದು ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಕಾರ್ಯದರ್ಶಿ ಅಶೋಕ ಕುಸಬಿ, ಮೆಹಬೂಬಸಾಬ ಬಳ್ಳಾರಿ, ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ವೆಂಕಟೇಶ ಬಿಂಕದಕಟ್ಟಿ, ಬಸವರಾಜ ಕಳಸದ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಕಸ್ತೂರಿ ಹಳ್ಳಿ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಶೇಖಪ್ಪ ಶೆಗಣಿ, ಗಿರಜವ್ವ ಬನ್ನಿಮರದ, ಗೌಸಸಾಬ ಅಕ್ಕಿ, ಮಹ್ಮದ ಗಡಾದ, ರಿಜ್ವಾನ ಮುಲ್ಲಾ, ಸೈಯದ ಅಲ್ತಾಫ, ಮೆಹಬೂಬ ಮುಲ್ಲಾ, ಸಂಜು ಗದಗ, ರಾಜಪ್ಪ ಗೌಳಿ, ರಿಯಾಜ ಪಾಮಡಿ, ಜಂದಿಸಾಬ ಢಾಲಾಯತ ಸೇರಿದಂತೆ ನೂರಾರು ಸ್ಲಂ ನಿವಾಸಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಹಿರೇಮಠದ ಜಾತ್ರೆ ಸಂಸ್ಕಾರ ಕಲಿಸುವ ಜಾತ್ರೆ




■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮೂರಿನ ಹಿರೇಮಠದ ಜಾತ್ರೆಯು ನಮ್ಮೆಲ್ಲರಿಗೂ ಸಂಸ್ಕಾರ ಕಲಿಸುವ ಜಾತ್ರೆಯಾಗಿದೆ. ಪ್ರತಿ ವರ್ಷದ ಕಾರ್ತಿಕ ಮಾಸದಲ್ಲಿ ಷ. ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಏರ್ಪಡಿಸುವ ಈ ಜಾತ್ರೆಯಲ್ಲಿ ಅವರಿಂದ ಪ್ರವಚನ ಕೇಳುವುದರ ಜೊತೆಗೆ ಅನೇಕ ವಿದ್ವನ್ಮಣಿಗಳಿಂದ ವಿಚಾರ ಪ್ರಚೋದಕ ಮಾತುಗಳನ್ನು ಕೇಳಿ ನಮ್ಮ ಜೀವನವನ್ನು ಸಾರ್ಥಕ ಮಾಡಿಕೊಳ್ಳುತ್ತೇವೆ ಎಂದು ನರೇಗಲ್ಲ ಬಣಜಿಗರ ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಹೇಳಿದರು.

ಹಿರೇಮಠದಲ್ಲಿ ನಡೆದಿರುವ ಜಾತ್ರಾಮಹೋತ್ಸವದ 3ನೇ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶ್ರೀಗಳವರು ನಮಗೆ ಸೂಕ್ತ ಮಾರ್ಗದರ್ಶನ ಮಾಡುತ್ತ ನಮ್ಮೆಲ್ಲರ ಕಾಳಜಿಯನ್ನು ಮಾಡುತ್ತಿದ್ದಾರೆ. ಎಲ್ಲರೂ ಸುಖ, ಸಂತೋಷ, ನೆಮ್ಮದಿಯಿಂದ ಬದುಕಬೇಕೆಂಬುದು ಅವರ ಆಸೆಯಾಗಿದೆ. ಅದಕ್ಕಾಗಿ ನೀವೂ ಸಂಸ್ಕಾರವಂತರಾಗಿ ಮತ್ತು ನಿಮ್ಮ ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಮಾಡಿರಿ ಎಂದು ಯಾವಾಗಲೂ ಹೇಳುತ್ತಾರೆ. ಇದು ನಮಗೆಲ್ಲರಿಗೂ ದಾರಿದೀಪವಾಗಿದೆ ಎಂದರು.

ಗಣ್ಯ ವರ್ತಕ ಮುತ್ತಣ್ಣ ಪಲ್ಲೇದ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಆಶೀರ್ವಚನ ನೀಡಿದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ವಚನ ಸಾಹಿತ್ಯ ಹೇಗೆ ಶರಣರಿಂದ ಶ್ರೀಮಂತವಾಗಿದೆಯೋ ಹಾಗೆಯೇ ದಾಸರಿಂದ ದಾಸ ಸಾಹಿತ್ಯವೂ ಶ್ರೀಮಂತವಾಗಿದೆ. ಪುರಂದರದಾಸರು, ಕನಕದಾಸರು, ವೆಂಕಟವಿಠ್ಠಲ ದಾಸರು, ಪ್ರಸನ್ನ ವೆಂಕಟದಾಸರು ಹೀಗೆ ಅನೇಕ ದಾಸರು ದಾಸ ಪರಂಪರೆಯಲ್ಲಿ ಬರುತ್ತಾರೆ. ಅವರು ಕಟ್ಟಿಕೊಟ್ಟಿರುವ ಕೀರ್ತನೆಗಳು, ಕಥೆಗಳು ಮುಂತಾದವುಗಳು ನಮ್ಮ ಬಾಳಿಗೆ ದಾರಿ ದೀಪವಾಗಿವೆ ಎಂದರು.

ವೇದಿಕೆಯ ಮೇಲೆ ಗುರುಪಾದಪ್ಪ ಬೆಲ್ಲದ, ಶಶಿಧರ ಓದುಸುಮಠ, ರಮೇಶ ಕಳಕಣ್ಣವರ, ಬಸಪ್ಪ ಮಡಿವಾಳರ ಮುಂತಾದವರಿದ್ದರು.

ಶಿಕ್ಷಕ ಸುರೇಶ ಹಳ್ಳಿಕೇರಿ ಸ್ವಾಗತಿಸಿದರು. ನರೇಗಲ್ಲದ ಬಣಜಿಗರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಶ್ರೀಗಳಿಗೆ ಗೌರವ ಸನ್ಮಾನವನ್ನು ನೀಡಿದರು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ನಿವೃತ್ತ ಮುಖ್ಯ ಶಿಕ್ಷಕ ಕೆ.ಎಸ್. ಕಳಕಣ್ಣವರ ನಿರೂಪಿಸಿದರು.

# ನಾಳೆ ವಿದ್ಯುತ್ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿದೆ.

ಇದರ ಪ್ರಯುಕ್ತ ನ. 15ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು. ಗದಗ ಗ್ರಾಮೀಣ ಉಪವಿಭಾಗದಲ್ಲಿ ಅಧೀಕ್ಷಕ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನೆ ವೃತ್ತ, ಹುವಿಸಕಂನಿ ಗದಗ ಅವರ ಅಧ್ಯಕ್ಷತೆಯಲ್ಲಿ ವಿದ್ಯುತ್ ಅದಾಲತ್ತನ್ನು ನಡೆಸಲಾಗುವುದು. ಆದ್ದರಿಂದ ಸಾರ್ವಜನಿಕರು ಪ್ರಕಟನೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಕೋರಲಾಗಿದೆ.

# ಕ್ರೀಡಾಕೂಟದಲ್ಲಿ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗೊಜನೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನ ನೀಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳಾದ ಹರೀಶ ಕಳಸೂರ 100 ಮೀ, 200 ಮೀ ಓಟದಲ್ಲಿ ಪ್ರಥಮ ಮತ್ತು ಉದ್ದ ಜಿಗಿತದಲ್ಲಿ ದ್ವಿತೀಯ, ರಾಧಾ ಗಾಂಜಿ 800 ಮೀ, 1500 ಮೀ ಓಟ ಮತ್ತು 4/100 ಮೀ ರಿಲೆ ಪ್ರಥಮ, ಅನಿತಾ ಭಜಂತ್ರಿ 400 ಮೀ ದ್ವಿತೀಯ, ಮೇಘಾ ಲಮಾಣಿ, ಪ್ರಿಯಾಂಕ ವಿರಕ್ತಮಠ, ಮಧುಮತಿ ಮಾಗಡಿ, ಸಹನಾ ಕಮ್ಮಾರ ಇವರುಗಳು 4/400 ಮೀ ರಿಲೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ಎಂ.ಎಂ. ತುಂಬರಮಟ್ಟಿ ಸೇರಿ ಶಾಲೆಯ ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿದೆ.

# ಕ್ರೀಡಾಕೂಟ: ರಾಜ್ಯಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ಸ್ಪೆಕ್ಟ್ರಮ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿನಿ ದಿವ್ಯಶ್ರೀ ಕಟ್ಟಿಮನಿ ಗದುಗಿನಲ್ಲಿ ನಡೆದ ಜಿಲ್ಲಾ ಮಟ್ಟದ ಕ್ರೀಡಾಕೂಟದ 100 ಮೀಟರ್ ಓಟ ಮತ್ತು ಹಡಲ್ಸ್‌ನಲ್ಲಿ ಪ್ರಥಮ ಸ್ಥಾನ ಪಡೆದು 2ನೇ ಬಾರಿಗೆ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ

ಸೈದಾ ಆಲಿಯಾ ಪಿರ್ಜಾಧೆ 100 ಮೀಟರ್ ಓಟ ಮತ್ತು ತ್ರಿವಿಧ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ





ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಈ ವಿದ್ಯಾರ್ಥಿಗಳ ಸಾಧನೆಗೆ ಶಾಲಾ ಆಡಳಿತ ಮಂಡಳಿಯ ಕಾರ್ಯದರ್ಶಿ ಲೋಹಿತ್ ನೆಲವಗಿ ಮತ್ತು ಶಾಲೆಯ ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

# ಬಡತನ, ನಿರುದ್ಯೋಗ ಪ್ರಮುಖ ಸಮಸ್ಯೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬಡತನ ಹಾಗೂ ನಿರುದ್ಯೋಗ ನಮ್ಮ ದೇಶದಲ್ಲಿ ಪ್ರಮುಖ ಸಮಸ್ಯೆ. ನಿರಕ್ಷರತೆ ಇಂದು ನಿವಾರಣೆಯಾಗುತ್ತಿದೆ. ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದಿಂದ ರುಡ್‌ಸೆಟ್ ಸಂಸ್ಥೆಯನ್ನು ಹುಟ್ಟುಹಾಕಿ ಸಾಕಷ್ಟು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ನಿರ್ದೇಶಕ ಕೇಶವ ದೇವಾಂಗ ತಿಳಿಸಿದರು.

ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಗವಿಮಠದಲ್ಲಿ ಸಂಘದ ಸದಸ್ಯರಿಗೆ ಹಮ್ಮಿಕೊಂಡಿರುವ ಜ್ಞಾನ ವಿಕಾಸ ಕಾರ್ಯಕ್ರಮದಲ್ಲಿ ಉಚಿತ ಹೊಲಿಗೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಿರುದ್ಯೋಗ ನಿವಾರಣೆಗೆ ಉಚಿತ ತರಬೇತಿಯಿಂದ ಕುಟುಂಬದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ. ಇಂದು ಕೈಮಗ್ಗ ಹೋಗಿ ಯಾಂತ್ರೀಕರಣದಿಂದ ಬಟ್ಟೆ ತಯಾರಿಸಲಾಗುತ್ತದೆ. ಇಂತಹ ಅನೇಕ ತರಬೇತಿ ನೀಡಿ ತಮ್ಮ ಸ್ವಂತ ಕಾಲ ಮೇಲೆ ನಿಲ್ಲುವಂತೆ ಮಾಡಲಾಗಿದೆ. ತರಬೇತಿ ಪಡೆಯುವವರಿಗೆ ಕೆಲಸದಲ್ಲಿ ಆಸಕ್ತಿ ಬೇಕು. ಕಲಿತ ವಿದ್ಯೆ ಮರೆಯುವದಿಲ್ಲ. ಇದರಿಂದ ಆರ್ಥಿಕ ಬಲ ಹೆಚ್ಚಿಸುತ್ತದೆ ಎಂದರು.

ಯೋಜನಾಧಿಕಾರಿ ಪುನಿತ ಓಲೇಕಾರ ಮಾತನಾಡಿ, ತರಬೇತಿಯ 3 ತಿಂಗಳ ಅವಧಿಯಲ್ಲಿ ಜ್ಞಾನವಿಕಾಸ ಮಾಡಿಕೊಳ್ಳಿ. ಅದರಿಂದ ಕುಟುಂಬದ ಆರ್ಥಿಕ ಸಬಲತೆ ಹೆಚ್ಚಿಸಿಕೊಳ್ಳಿ ಎಂದರು.

ಈ ಸಂದರ್ಭದಲ್ಲಿ ಯೋಗ ಶಿಕ್ಷಕ ಪ್ರಕಾಶ ಮದ್ದಿನ, ಮಹೇಶ ನೀಲಗುಂದ, ಮೇಲ್ವಿಚಾರಕಿ ಬಿ. ಶಾಂತಾ, ಸೇವಾ ನಿರತರು, ಸಂಘದ ಸದಸ್ಯರು ಭಾಗವಹಿಸಿದ್ದರು.

## ಅತಿರುದ್ರ ಮಹಾಯಜ್ಞದಲ್ಲಿ ರುದ್ರಾಕ್ಷಿ ವಿತರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿಯ ಆವರಣದಲ್ಲಿ ಅತಿರುದ್ರ ಮಹಾಯಜ್ಞ ಸಮಿತಿಯ ಅಡಿಯಲ್ಲಿ ನಾಗಾಸಾಧು ಶ್ರೀ ಸಹದೇವಾನಂದ ಗಿರಿ ಜಿ ಮಹಾರಾಜರ ನೇತೃತ್ವದಲ್ಲಿ ನಡೆಯುತ್ತಿರುವ ಕಿರಿಯ ಕುಂಭಮೇಳದ ಅಂಗವಾಗಿ ನಾಗಾಸಾಧುಗಳಿಂದ ನಗರದ ಭಕ್ತಾಧಿಗಳಿಗೆ ಲಕ್ಷ ರುದ್ರಾಕ್ಷಿ ವಿತರಣೆ ಕಾರ್ಯಕ್ರಮದಲ್ಲಿ ಭಕ್ತರು ಸರತಿ ಸಾಲಿನಲ್ಲಿ ನಿಂತು ರುದ್ರಾಕ್ಷಿ ಆಶೀರ್ವಾದ ಪಡೆದರು.

ಅತಿರುದ್ರ ಮಹಾಯಜ್ಞದಲ್ಲಿ ಭಾಗವಹಿಸಿ ಶಿವಲಿಂಗದ ರುದ್ರಾಭಿಷೇಕ ಮಾಡುವದರಿಂದ 1.25 ಲಕ್ಷ ಮಹಾ ಮೃತ್ಯುಂಜಯದ ಜಪದ ಫಲ ಪ್ರಾಪ್ತಿಯಾಗುತ್ತದೆ. ಯಾಗದ ಸಮಯದಲ್ಲಿ ಬಲವಾದ ಧನಾತ್ಮಕ ಶಕ್ತಿಯ ಸೃಷ್ಟಿಯಾಗುವದರಿಂದ ಪರಿಸರವನ್ನು ಮತ್ತು ಪಾಲ್ಗೊಂಡವರನ್ನು ಶುದ್ಧೀಕರಿಸುತ್ತದೆ.

ಭಗವಾನ್ ರುದ್ರನು ಸಮಸ್ತ ನಕಾರಾತ್ಮಕ ಶಕ್ತಿಗಳ ನಿವಾರಕನಾಗಿರುವದರಿಂದ ಈ ಯಾಗದಿಂದ ನಕಾರಾತ್ಮಕ ಶಕ್ತಿಗಳು ನಾಶವಾಗುತ್ತವೆ. ಅತಿರುದ್ರ ಮಹಾಯಜ್ಞದಿಂದ ಲಕ್ಷ್ಮೀ ದೇವಿಯ ಅನುಗ್ರಹವಾಗುತ್ತದೆ. ಅತಿರುದ್ರ ಯಾಗವು ತ್ರಿಲೋಕಗಳ ಅಧಿಪತಿಯಾದ ಭಗವಾನ್ ರುದ್ರನನ್ನು ಪ್ರಾರ್ಥಿಸುವ ಒಂದು ಆಚರಣೆಯಾಗಿದ್ದು, ಇದರಿಂದ ರುದ್ರನ ಕರುಣೆ ಮತ್ತು ಅನುಗ್ರಹವನ್ನು ಪಡೆಯಲು ಹಾಗೂ ಮೋಕ್ಷ ಹೊಂದುವ ಶ್ರೇಷ್ಠ ಮಾರ್ಗವಾಗಿದೆ.

### ಹಿಂದುಳಿದ ವರ್ಗಗಳ ಸಾಮಾಜಿಕ ಸಮೀಕ್ಷೆ ಸಂದರ್ಭದಲ್ಲಿ ಅಪಘಾತಕ್ಕೆ ಒಳಗಾಗಿದ್ದ ಶಿಕ್ಷಕರು

# ವಿಶೇಷ ಅಂಗವೈಕಲ್ಯ ರಜೆ ಮಂಜೂರು

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಹಿಂದುಳಿದ ವರ್ಗಗಳ ಆಯೋಗದ ಆದೇಶದಂತೆ ಧಾರವಾಡ ಜಿಲ್ಲೆಯಲ್ಲಿ ಕೈಗೊಂಡ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ಭಾಗವಹಿಸಿದ್ದ ಶಿಕ್ಷಕರು, ಆಕಸ್ಮಿಕವಾಗಿ ಬೈಕ್ ಅಪಘಾತ ಹಾಗೂ ಜಾರಿ ಬಿದ್ದು ಮೂಳೆ ಮುರಿತವಾಗಿದ್ದ ಓರ್ವ ಶಿಕ್ಷಕ ಹಾಗೂ ಇಬ್ಬರು ಶಿಕ್ಷಕಿಯರಿಗೆ ವಿಶೇಷ ರಜೆ ಮಂಜೂರು ಮಾಡಲು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ನೀಡಿದ್ದ ನಿರ್ದೇಶನವನ್ನು ಪಾಲಿಸಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿಶೇಷ ರಜೆಯನ್ನು ಮಂಜೂರು ಮಾಡಿ, ನ. 13ರಂದು ಆದೇಶಿಸಿದ್ದಾರೆ.

ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳು ಭಾಗವಹಿಸಿದ್ದರು. ಧಾರವಾಡ ತಾಲೂಕಿನ ದುರ್ಗದಕೇರಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಸುರೇಶ ಪೂಜಾರ ಅವರು ಕೂಡ ಸಮೀಕ್ಷಾ ಕಾರ್ಯದಲ್ಲಿ ಭಾಗವಹಿಸಿದ್ದರು. ಅವರು ಸಮೀಕ್ಷಾ ಕಾರ್ಯಕ್ಕೆ ತೆರಳುವಾಗ ಬೈಕ್ ಸ್ಕಿಡ್ ಆಗಿ ಅಪಘಾತಕ್ಕೆ ಒಳಗಾಗಿದ್ದರು. ಗಂಭೀರ ಗಾಯವಾಗಿ, ಕಾಲಿನ ಮೂಳೆ ಮುರಿತದಿಂದ ವಿಶ್ರಾಂತಿ ಪಡೆಯುತ್ತಿದ್ದಾರೆ. ಇವರಿಗೆ ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಕೆ.ಸಿ.ಎಸ್.ಆರ್. ನಿಯಮದಂತೆ ವಿಶೇಷ ಅಂಗವೈಕಲ್ಯ ರಜೆ ಮಂಜೂರು ಮಾಡಿ ಧಾರವಾಡ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ ಆದೇಶಿಸಿದ್ದಾರೆ.



ಸರ್ಕಾರದ ಆದೇಶದಂತೆ ಆಯೋಗದ ಸಮೀಕ್ಷಾ ಕಾರ್ಯದಲ್ಲಿ ಭಾಗವಹಿಸಿದ್ದ ಶಿಕ್ಷಕರು ಆಕಸ್ಮಿಕ ಅಪಘಾತಕ್ಕೆ ಒಳಗಾಗಿ ಅನಾರೋಗ್ಯ ಪೀಡಿತರಾಗಿದ್ದಕ್ಕೆ ಶಿಕ್ಷಕರ ಮನವಿ ಮೇರೆಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ನೀಡಿದ್ದ ಭರವಸೆಯಂತೆ ನೌಕರರ ಬಗ್ಗೆ ವಿಶೇಷ ಕಾಳಜಿ ಮತ್ತು ಮುತ್ತುವರ್ಜಿ ವಹಿಸಿ 120 ದಿನಗಳ ವಿಶೇಷ ಅಂಗವೈಕಲ್ಯ ರಜೆಗಳನ್ನು ಮಂಜೂರು ಮಾಡಿಸಿದ್ದಾರೆ.

ಅದರಂತೆ ಕುಂದಗೋಳ ತಾಲೂಕಿನ ಕಮಡೊಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆಯ ಪ್ರಧಾನ ಗುರು ಸುಶೀಲಾ ಶಂ.ಪಾಟೀಲ ಹಾಗೂ ಹಿರೇಹರಕುಣಿ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆಯ ಸಹಶಿಕ್ಷಕಿ ವೀಣಾ ಬ.ಚನ್ನಿ ಅವರಿಗೆ ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಕೆ.ಸಿ.ಎಸ್.ಆರ್. ನಿಯಮದಂತೆ ವಿಶೇಷ ಅಂಗವೈಕಲ್ಯ ರಜೆ ಮಂಜೂರು ಮಾಡಿ ಕುಂದಗೋಳ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ಮಹಾದೇವಿ ಮಾಡಲಗೇರಿ ಅವರು ಆದೇಶಿಸಿದ್ದಾರೆ.

ಜಿಲ್ಲಾಧಿಕಾರಿಗಳ ಈ ಸ್ಪಂದನೆಗೆ ಚಿಕಿತ್ಸೆಯಲ್ಲಿರುವ ಗಾಯಾಳು ಶಿಕ್ಷಕರು, ಶಿಕ್ಷಕರ ಸಂಘದ ಪದಾಧಿಕಾರಿಗಳು ಮತ್ತು ಜಿಲ್ಲೆಯ ಸರ್ಕಾರಿ ನೌಕರರು ಮೆಚ್ಚುಗೆ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದ್ದಾರೆ.

# ‘ಉಡಾಳ’ ಚಲನಚಿತ್ರ ಬಿಡುಗಡೆ ಇಂದು




**■ವಿಜಯಸಾಕ್ಷಿ ಸುದ್ದಿ, ಗದಗ**

ಸಂಪೂರ್ಣ ಉತ್ತರ ಕರ್ನಾಟಕದ ಪ್ರತಿಭೆಗಳನ್ನು ಒಳಗೊಂಡಿರುವ ‘ಉಡಾಳ’ ಚಲನಚಿತ್ರವು ನ. 14ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ ಎಂದು ಚಿತ್ರತಂಡದ ಸದಸ್ಯ ಹರೀಶ ಹಿರಿಯೂರು ತಿಳಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಉಡಾಳ ಚಿತ್ರವು ಪಕ್ಕಾ ಉತ್ತರ ಕರ್ನಾಟಕದ ವಿಶಿಷ್ಟ ಭಾಷೆಯಲ್ಲಿ, ವಿಜಯಪುರ ಭಾಗದಲ್ಲಿ ನಡೆಯುವ ಕಥಾ ಹಂದರವನ್ನು ಹೊಂದಿದೆ. ಪೃಥ್ವಿ ಶಾವನೂರು ನಾಯಕ ನಟನಾಗಿ ನಟಿಸಿರುವ ಈ ಚಿತ್ರವು ಅಮೋಲ್ ಪಾಟೀಲ ಅವರ ಕನಸಿನ ಕೂಸಾಗಿದ್ದು, ಅವರದೇ ನಿರ್ದೇಶನದಲ್ಲಿ ಮೂಡಿಬಂದಿದೆ. ಯೋಗರಾಜ್ ಭಟ್ ಮತ್ತು ರವಿ ಶಾವನೂರು ಅವರು ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ ಎಂದರು.

ಉತ್ತರ ಕರ್ನಾಟಕದ ಕಥಾ ಹಂದರವನ್ನು ಹೊಂದಿರುವ ಕಾರಣ ಚಿತ್ರದಲ್ಲಿ ಉತ್ತರ ಕರ್ನಾಟಕದ ಹೆಸರಾಂತ ಯುಟ್ಯೂಬರ್‌ಗಳು, ರಂಗಭೂಮಿ ಕಲಾವಿದರು ಹಾಗೂ ಕಾಮಿಡಿ ಕಿಲಾಡಿಗಳ ಕಲಾವಿದರು ನಟಿಸಿದ್ದಾರೆ. ಸ್ಥಳೀಯ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಎಲ್ಲರೂ ಚಿತ್ರಮಂದಿರಕ್ಕೆ ಬಂದು ಚಲನಚಿತ್ರವನ್ನು ವೀಕ್ಷಿಸಬೇಕು ಎಂದು ಹರೀಶ ಹಿರಿಯೂರು ವಿನಂತಿಸಿಕೊಂಡರು.

ನಾಯಕ ನಟ ಪೃಥ್ವಿ ಶಾವನೂರು ಮಾತನಾಡಿ, ಈಗಾಗಲೇ ಉಡಾಳ ಚಲನಚಿತ್ರದ ಹಾಡುಗಳು ಸಾಮಾಜಿಕ ಜಾಲತಾಣಗಳಲ್ಲಿ ಟ್ರೆಂಡಿಂಗ್‌ನಲ್ಲಿವೆ. ಉತ್ತರ ಕರ್ನಾಟಕದ ಖ್ಯಾತ ಗಾಯಕರಾದ ಮಾಳು ನಿಪ್ಪನಾಳ, ಬಾಳು ಬೆಳಗುಂದಿ ಮತ್ತು ಕರಿಬಸವ ಅವರು ಹಾಡುಗಳಿಗೆ ಧ್ವನಿ ನೀಡಿದ್ದಾರೆ. ಗದಗ ಜಿಲ್ಲೆಯಲ್ಲಿ ಈ ಚಲನಚಿತ್ರವು ಮಹಾಲಕ್ಷ್ಮೀ ಟಾಕೀಜ್‌ನಲ್ಲಿ ಪ್ರದರ್ಶನಗೊಳ್ಳಲಿದೆ. ಎಲ್ಲಾ ಯುವ ಪ್ರತಿಭೆಗಳನ್ನು ಜಿಲ್ಲೆಯ ಜನರು ಚಿತ್ರಮಂದಿರದಲ್ಲಿ ವೀಕ್ಷಿಸಿ ಆಶೀರ್ವದಿಸಬೇಕು ಎಂದು ಕೋರಿದರು.

# ಜ್ಯೋತಿ ಕಬಾಡಿಗೆ ‘ಕದಂಬ ಸೇವಾ ರತ್ನ’ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್‌ನ ಅಧ್ಯಕ್ಷೆ ಜ್ಯೋತಿ ಉಜ್ವಲ ಕಬಾಡಿ ಅವರಿಗೆ ಕದಂಬ ಕನ್ನಡ ಸೇನೆ ಕರ್ನಾಟಕ ವತಿಯಿಂದ ನೀಡಲಾಗುವ ‘ಕದಂಬ ಸೇವಾ ರತ್ನ’ ರಾಜ್ಯಮಟ್ಟದ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಂಗೀತ, ಕಲೆ-ಸಂಸ್ಕೃತಿ ಪ್ರಚಾರ, ಸಮಾಜ ಸೇವೆ ಹಾಗೂ ಪ್ರತಿಭಾವೃದ್ಧಿಗೆ ನೀಡಿರುವ ಅಮೂಲ್ಯ ಕೊಡುಗೆಗಾಗಿ ಇವರನ್ನು ಈ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕನ್ನಡ ಸಂಸ್ಕೃತಿಯ ಸೇವೆಯಲ್ಲಿ ತೊಡಗಿಸಿಕೊಂಡಿರುವ ಇವರ ಸೇವೆ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ.




ಪ್ರಶಸ್ತಿ ಪ್ರದಾನ ಸಮಾರಂಭವು ಕದಂಬರ ನಾಡು ಬನವಾಸಿಯಲ್ಲಿ ಭವ್ಯವಾಗಿ ನೆರವೇರಿತು. ಈ ಸಂದರ್ಭದಲ್ಲಿ ಕದಂಬ ಕನ್ನಡ ಸೈನ್ಯದ ಸಂಸ್ಥಾಪಕ ಅಧ್ಯಕ್ಷ ನಾ.ಅಂಬರೀಶ್, ರಾಜ್ಯಾಧ್ಯಕ್ಷ ಶಿವಕುಮಾರ್, ರಾಜ್ಯ ಸಂಚಾಲಕ ಗೈಬುಸಾಬ ಕಲೆಬಾಯಿ, ಉತ್ತರ ಕನ್ನಡ ಜಿಲ್ಲೆಯ ಅಧ್ಯಕ್ಷ ಸತೀಶ್ ನಾಯಕ್, ಗದಗ ಜಿಲ್ಲಾಧ್ಯಕ್ಷ ಈಶ್ವರ್, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಸೌಮ್ಯ ಜೋಶ್ವ ಮುಂತಾದವರು ಉಪಸ್ಥಿತರಿದ್ದರು.

# ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಗದಗ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ ತಾಲೂಕು ಹಾಗೂ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಉತ್ತಮ ಸಾಧನೆಗೈದಿದ್ದಾರೆ.

ಶುಭಮ್ ಕಬಾಡೆ ಉದ್ದ ಜಿಗಿತದಲ್ಲಿ ಪ್ರಥಮ, ಶರೀಫ ಶೇಖ ಉದ್ದ ಜಿಗಿತದಲ್ಲಿ ದ್ವಿತೀಯ, ಅಮನ್ ತಹಸೀಲ್ದಾರ ಗುಂಡು ಎಸೆತ ಹಾಗೂ ಚಕ್ರ ಎಸೆತದಲ್ಲಿ ಪ್ರಥಮ, ವೈಷ್ಣವಿ ಕಾಮರೆಡ್ಡಿ ಉದ್ದ ಜಿಗಿತದಲ್ಲಿ ದ್ವಿತೀಯ, ಮಿಜಬಾ ದುರ್ಗಿಗುಡಿ ಭಲ್ಲೆ ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಶುಭಮ್ ಕಬಾಡೆ ಉದ್ದ ಜಿಗಿತದಲ್ಲಿ ತೃತೀಯ, ಅನಮ್ ತಹಸೀಲ್ದಾರ ಗುಂಡು ಎಸೆತ, ಚಕ್ರ ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಶಾಲಾ

# ತಂಬಾಕು ಮುಕ್ತ ಯುವ ಅಭಿಯಾನಕ್ಕೆ ಕೈಜೋಡಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಾಲೂಕ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಇವುಗಳ ಸಂಯುಕ್ತ ಆಶ್ರಯದಲ್ಲಿ ತಾಲೂಕಾ ಆರೋಗ್ಯ ಅಧಿಕಾರಿಗಳ ಕಚೇರಿಯ ಸಭಾಭವನದಲ್ಲಿ ಗದಗ ತಾಲೂಕಿನ ಆಶಾ ಕಾರ್ಯಕರ್ತೆಯರಿಗೆ ತಂಬಾಕು ಮುಕ್ತ ಯುವ ಅಭಿಯಾನ 3.0 ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್.ಗಡಾದ ಅವರು ತಂಬಾಕು ಮುಕ್ತ ಯುವ ಅಭಿಯಾನ 3.0 ಕುರಿತು ಮಾತನಾಡಿ, ಪ್ರತಿ ವರ್ಷ ವಿಶ್ವದಾದ್ಯಂತ 6 ಸೆಕೆಂಡುಗಳಿಗೊಬ್ಬರಂತೆ 60 ಲಕ್ಷಕ್ಕಿಂತ ಹೆಚ್ಚು ಜನರು ತಂಬಾಕು ಸೇವನೆಯಿಂದ ಉಂಟಾಗುವ ಕಾಯಿಲೆಗಳಿಂದ ಸಾವನ್ನಪ್ಪುತ್ತಿದ್ದಾರೆ. ಕರ್ನಾಟಕದಲ್ಲಿ ಶೇ. 28.8ರಷ್ಟು ವ್ಯಕ್ತಿಗಳು ಯಾವುದಾದರೂ ಒಂದು ರೀತಿಯ ತಂಬಾಕು ಉತ್ಪನ್ನ ಸೇವನೆ ಮಾಡುತ್ತಾರೆ. ಅನೇಕರು ಯುವ ಅಂದರೆ 19 ವಯಸ್ಸಿನಲ್ಲಿಯೇ ತಂಬಾಕು ಉತ್ಪನ್ನಗಳ ಸೇವನೆಯನ್ನು ಆರಂಭಿಸುತ್ತಾರೆ. ತಂಬಾಕಿನಿಂದ ಕ್ಯಾನ್ಸರ್, ಹೃದಯ ಹಾಗೂ ಶ್ವಾಸ ಸಂಬಂಧಿ ಅನೇಕ ಮಾರಣಾಂತಿಕ ಕಾಯಿಲೆಗಳು ಬರುತ್ತವೆ. ತಂಬಾಕು ಮತ್ತು ತಂಬಾಕು ಉತ್ಪನ್ನಗಳಲ್ಲಿ ಸುಮಾರು ಏಳು ಸಾವಿರ ರಾಸಾಯನಿಕ ವಸ್ತುಗಳಿದ್ದು, ಅದರಲ್ಲಿ 69ರಷ್ಟು ಕ್ಯಾನ್ಸರ್ ಕಾರಕವಸ್ತುಗಳಿವೆ. 21 ವರ್ಷದೊಳಗಿನ ವ್ಯಕ್ತಿಗೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಈ ತಂಬಾಕು ಸೇವನೆಯ ಕುರಿತು ಜಾಗೃತಿ ಮೂಡಿಸಲು ತಂಬಾಕು ಮುಕ್ತ ಯುವ ಅಭಿಯಾನ 3.0 ಕಾರ್ಯಕ್ರಮವನ್ನು ಆರೋಗ್ಯ ಇಲಾಖೆಯು ಹಮ್ಮಿಕೊಂಡಿದ್ದು, ಎಲ್ಲರೂ ಇದಕ್ಕೆ ಕೈಜೋಡಿಸಿ ಯಶಸ್ವಿಗೊಳಿಸಬೇಕೆಂದರು.




ಗದಗ ತಾಲೂಕು ಆಶಾ ಮೇಲ್ವಿಚಾರಕರಾದ ಎನ್ ನವೀನ್ ಕುಮಾರಿ ಮಾತನಾಡಿ, ತಂಬಾಕು ವಿಷನ್‌ಗಳಿಗೆ ಮತ್ತು ಧೂಮಪಾನಿಗಳಿಗೆ ಉಚಿತ ಆಪ್ತ ಸಮಾಲೋಚನೆಯನ್ನು, ಉಚಿತ ಔಷಧೋಪಚಾರವನ್ನು ಜಿಲ್ಲಾ ಆಸ್ಪತ್ರೆಯ ತಂಬಾಕು ವ್ಯಸನಮುಕ್ತ ಕೇಂದ್ರದಲ್ಲಿ ನೀಡಲಾಗುತ್ತಿದ್ದು, ಇದರ ಸದುಪಯೋಗವನ್ನು ಪಡೆಯಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಡಾ. ಕುಂಬಾರರಿಗೆ ಇತಿಹಾಸ ಅಕಾಡೆಮಿ ಪ್ರಶಸ್ತಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮ ಗಾಂಧಿ ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಇತಿಹಾಸ ಅಕಾಡೆಮಿ, ಮಹಾತ್ಮ ಗಾಂಧಿ ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಸಹಯೋಗದಲ್ಲಿ ಜರುಗಿದ 39ನೇ ವಾರ್ಷಿಕ ರಾಷ್ಟ್ರೀಯ ಸಮ್ಮೇಳನ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಜೂರ ಗ್ರಾಮದ ಡಾ. ಮಲ್ಲಿಕಾರ್ಜುನ ಕುಂಬಾರರಿಗೆ ‘ನೋಳಂಬ ಶ್ರೀ’ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕುಂಬಾರ ಅವರ ‘ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಮುಧೋಳ ಗ್ರಾಮದ ಅಪ್ರಕಟಿತ ಶಾಸನ’ ಸಂಶೋಧನೆಯನ್ನು ಪರಿಗಣಿಸಿ ಅಕಾಡೆಮಿಯು ಅರಸಿಕೆರೆ ಮೇಲಣಮಠದ ಲಿಂ.ಶ್ರೀ ಎಸ್.ಸಿದ್ದಣ್ಣಯ್ಯ ಮತ್ತು ಶ್ರೀಮತಿ ಗಂಗಮ್ಮ ಸ್ಮಾರಕ ಟ್ರಸ್ಟ್ ನೀಡುವ ‘ನೋಳಂಬ ಶ್ರೀ’ ಪ್ರಕಟಿಸಿತ್ತು.

ಸಮಾರಂಭದಲ್ಲಿ ಡಾ. ಕುಂಬಾರ ಸೇರಿದಂತೆ ಇತಿಹಾಸ ತಜ್ಞ ಡಾ. ಶ್ರೀನಿವಾಸ ಪಾಡಿಗಾರ, ಡಾ. ಕೆ.ವಸಂತಲಕ್ಷ್ಮೀ, ಡಾ. ಎಸ್.ನಾಗರಾಜಪ್ಪ, ಡಾ. ಶರಣಬಸಪ್ಪ ಕೋಲ್ಕಾರ, ಡಾ. ರಮೇಶ ನಾಯಕ, ಡಾ. ಪದ್ಮಜಾ ದೇಸಾಯಿ, ಪ್ರೊ. ಶಾಶ್ವತಸ್ವಾಮಿ ಮುಕ್ಕುಂದಿಮಠ, ಡಾ. ಎಂ.ಕೊಟ್ರೇಶ್, ಮಹಾದೇವ ಜಗತಾಪ, ಡಾ. ಎ.ಪಿ. ನರಸಿಂಹಮೂರ್ತಿ, ಒವನ್ ಮೌರ್ಯ ಚಕ್ರವರ್ತಿ ಅವರಿಗೂ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಸಮ್ಮೇಳನದ ಸರ್ವಾಧ್ಯಕ್ಷ ಡಾ. ರಾಜಾರಾಮ ಹೆಗಡೆ, ವಿಶ್ವವಿದ್ಯಾಲಯದ ಸಹಾಯಕ ನಿರ್ದೇಶಕ ಡಾ. ಅಬ್ದುಲ್ ಮುಲ್ಲಾ, ಇತಿಹಾಸ ತಜ್ಞ ಡಾ.ಲಕ್ಷ್ಮಣ್ ತೆಲಗಾವಿ, ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ ನಾಡಗೌಡರ ಮುಂತಾದವರಿದ್ದರು.



ಗದಗ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಶಿಗ್ಲಿ ಗ್ರಾಮದ ಎಸ್.ಎಸ್. ಕೂಡ್ಲಮಠ ಮಾಧ್ಯಮಿಕ ಶಾಲೆಯ ಮಂಜುನಾಥ ಹಳೆರಿತ್ತಿ ಸರಪಳಿ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಚಕ್ರ ಎಸೆತದಲ್ಲಿ ರೇಣುಕಾ ಹಳ್ಳಿಕುಪ್ಪಿ ಸರಪಳಿ ದ್ವಿತೀಯ, ಗುಂಡು ಮತ್ತು ಸರಪಳಿ ಎಸೆತದಲ್ಲಿ ಶೃಶಗೌಡ ಪಾಟೀಲ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಶಾಲಾ ಆಡಳಿತ ಮಂಡಳಿ, ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka